ದಾವಣಗೆರೆಯಿಂದ

ಮುಂಜಾನೆಯ ಮೆರಗು

ಸಂಪಾದಕ: ರವಿಕುಮಾರ ಜೆ.ಓ

MUNJANEYA MERAGU

ಕನ್ನಡ ದಿನಪತ್ರಿಕೆ

Editor : RAVIKUMARA J.O.

Kannada Daily

Davangere **Volume :**1 **Issue:** 102 Thursday **08-10-2026 PRGI. NO. KNKAN/26/A4616,** Mob:- 8880222429 Page : 4 **Price :** 2-00/-

ದಾವಣಗೆರೆ ಸಂಪುಟ : 1 ಸಂಚಿಕೆ : 102 ಗುರುವಾರ **Email:** munjaneyameragu@gmail.com ಮೊ: 8880222429 ಪುಟ : 4 ಬೆಲೆ–ರೂ.2.00/–

ಮಳೆ ಕೈಕೊಟ್ಟಿತು, ಬೆಳೆ ಕೈಕೊಟ್ಟಿತು; ಎಕರೆಗೆ 15 ಸಾವಿರ ಪರಿಹಾರಕ್ಕೆ ರೈತರ ಆಗ್ರಹ

40 ಸಾವಿರ ಹೆಕ್ಟೇರ್‌ಗೂ ಹೆಚ್ಚು ಪ್ರದೇಶದಲ್ಲಿ ಬೆಳೆ ನಷ್ಟದ ಆತಂಕ । ಸಾಲದ ಹೊರೆ, ಮೇವಿನ ಕೊರತೆಯಿಂದ ಅನ್ನದಾತ ಕಂಗಾಲು

“ಮುಂಜಾನೆಯ ಮೆರಗು”

ಜಗಳೂರು, ಅ, 07– ಮುಂಗಾರು ಮಳೆ ಕೈಕೊಟ್ಟ ಪರಿಣಾಮ ಜಗಳೂರು ತಾಲೂಕಿನಲ್ಲಿ ಕೃಷಿ ಚಟುವಟಿಕೆಗಳು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ಬಿತ್ತನೆ ಮಾಡಿದ್ದ ಬೆಳೆಗಳು ಮಳೆ ಕೊರತೆಯಿಂದ ಒಣಗಿ ಹೋಗಿವೆ. ಬೆಳೆ ಕೈಕೊಡದೆ ಹೋಗಿರುವ ಹಿನ್ನೆಲೆಯಲ್ಲಿ ರೈತರು ಸಾಲದ ಸುಳಿಯಲ್ಲಿ ಸಿಲುಕುವ ಆತಂಕ ಎದುರಿಸುತ್ತಿದ್ದಾರೆ. ಸರ್ಕಾರ ನೀಡುವ ಅಲ್ಪ ಪ್ರಮಾಣದ ಪರಿಹಾರದಿಂದ ರೈತರ ಸಂಕಷ್ಟಕ್ಕೆ ಶಾಶ್ವತ ಪರಿಹಾರ ದೊರೆಯುವುದಿಲ್ಲ. ಆದ್ದರಿಂದ ಕನಿಷ್ಠ ಎಕರೆಗೆ 15 ಸಾವಿರ ಪರಿಹಾರಧನ ನೀಡಬೇಕು ಎಂದು ರೈತರು ಹಾಗೂ ರೈತ ಸಂಘಟನೆಗಳು ಒತ್ತಾಯಿಸಿವೆ.

ತಾಲೂಕಿನಲ್ಲಿ ಒಟ್ಟು ಸುಮಾರು 54 ಸಾವಿರ ಹೆಕ್ಟೇರ್ ಕೃಷಿ ಪ್ರದೇಶವಿದ್ದು, ಈ ಪೈಕಿ ಸುಮಾರು 40 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಮಾಡಲಾಗಿತ್ತು. ಮುಂಗಾರು ಹಂಗಾಮಿನಲ್ಲಿ ನಿರೀಕ್ಷಿತ ಪ್ರಮಾಣದಲ್ಲಿ ಮಳೆ ಸುರಿಯದ ಪರಿಣಾಮ ರಾಗಿ, ಮೆಕ್ಕೆಜೋಳ, ಶೇಂಗಾ ಸೇರಿದಂತೆ ವಿವಿಧ ಬೆಳೆಗಳು ತೇವಾಂಶದ ಕೊರತೆಯಿಂದ ಒಣಗುತ್ತಿವೆ. ಕೆಲವೆಡೆ ಬೆಳೆಗಳು ತೆನೆ, ಕಾಳು ಕಟ್ಟುವ ಹಂತಕ್ಕೆ ಬರುವ ಮುನ್ನವೇ ಒಣಗಿರುವುದು ರೈತರ ಆತಂಕವನ್ನು ಮತ್ತಷ್ಟು ಹೆಚ್ಚಿಸಿದೆ.



“15 ಸಾವಿರ ಪರಿಹಾರ ನೀಡಲಿ”

ಸರ್ಕಾರ ನೀಡುವ ಬೆರಳೆಣಿಕೆಯಷ್ಟು ಪರಿಹಾರ ರೈತರ ನಷ್ಟವನ್ನು ತುಂಬಲು ಸಾಕಾಗುವುದಿಲ್ಲ. ಬೀಜ, ರಸಗೊಬ್ಬರ, ಉಳುಮೆ ಹಾಗೂ ಕೂಲಿ ಸೇರಿದಂತೆ ಬಿತ್ತನೆಗೆ ರೈತರು ಸಾಕಷ್ಟು ಹಣ ಖರ್ಚು ಮಾಡಿದ್ದಾರೆ. ಮಳೆ ಕೈಕೊಟ್ಟು ಬೆಳೆ ಸಂಪೂರ್ಣ ನಷ್ಟವಾಗಿರುವುದರಿಂದ ಕನಿಷ್ಠ ಎಕರೆಗೆ 15 ಸಾವಿರ ಪರಿಹಾರ ನೀಡಿದರೆ ರೈತರಿಗೆ ಅನುಕೂಲವಾಗಲಿದೆ.

–– ಚಿರಂಜೀವಿ, ತಾಲೂಕು ಅಧ್ಯಕ್ಷರು, ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆ, (ಹುಚ್ಚವ್ವನಹಳ್ಳಿ ಮಂಜುನಾಥ ಬಣ)

ಬಿತ್ತನೆ ವೆಚ್ಚವೂ ಕೈತಪ್ಪಿದ ಫಸಲೂ

ಮಳೆ ನಂಬಿ ಬಿತ್ತನೆ ಮಾಡಿದ್ದ ರೈತರು ಬೀಜ, ರಸಗೊಬ್ಬರ, ಉಳುಮೆ, ಬಿತ್ತನೆ, ಕೂಲಿ ಸೇರಿದಂತೆ ವಿವಿಧ ಹಂತಗಳಲ್ಲಿ ಎಕರೆಗೆ ಸಾವಿರಾರು ರೂಪಾಯಿ ಖರ್ಚು ಮಾಡಿದ್ದಾರೆ. ಆದರೆ ಮಳೆಯ ಕೊರತೆಯಿಂದ ಬೆಳೆಗಳು ಒಣಗಿರುವುದರಿಂದ ಮಾಡಿದ ಖರ್ಚು ಕೂಡ ವಾಪಸ್ ಬಾರದ ಪರಿಸ್ಥಿತಿ ನಿರ್ಮಾಣವಾಗಿದೆ.

“ಬೆಳೆ ಕೈಗೆ ಬಂದಿದ್ದರೆ ಸಾಲ ತೀರಿಸಿ ಮುಂದಿನ ಕೃಷಿಗೆ ಸಿದ್ಧತೆ ಮಾಡಿಕೊಳ್ಳಬಹುದಿತ್ತು. ಆದರೆ ಬೆಳೆ ಕೈಕೊಟ್ಟಿದೆ. ಮತ್ತೊಂದೆಡೆ ಜಾನುವಾರುಗಳಿಗೆ ಮೇವು ಕೂಡ ಸಿಗುತ್ತಿಲ್ಲ. ಕೃಷಿಯನ್ನೇ ಅವಲಂಬಿಸಿರುವ ಕುಟುಂಬಗಳು ಜೀವನ ನಿರ್ವಹಣೆ ಮಾಡುವುದು ಕಷ್ಟವಾಗಿದೆ” ಎಂದು ರೈತರು ಅಳಲು ತೋಡಿಕೊಂಡಿದ್ದಾರೆ.

ಪರಿಹಾರ ಮೊತ್ತ ಹೆಚ್ಚಿಸಬೇಕು

ಪ್ರಸ್ತುತ ಸರ್ಕಾರದಿಂದ ದೊರೆಯುವ ಪರಿಹಾರಧನ ರೈತರು ಮಾಡಿರುವ ಕೃಷಿ ವೆಚ್ಚಕ್ಕೆ ಹೋಲಿಸಿದರೆ ಅತ್ಯಲ್ಪವಾಗಿದೆ. ಒಂದು ಎಕರೆಗೆ 15 ಸಾವಿರ ಪರಿಹಾರ ನೀಡಿದರೆ ಕನಿಷ್ಠ ಮಟ್ಟದಲ್ಲಾದರೂ ರೈತರಿಗೆ ಆರ್ಥಿಕ ನೆರವಾಗಲಿದೆ. ಬೆಳೆ ನಷ್ಟದ ಪ್ರಮಾಣವನ್ನು ವಾಸ್ತವಿಕವಾಗಿ ಪರಿಗಣಿಸಿ ಸರ್ಕಾರ ವಿಶೇಷ ಪರಿಹಾರ ಪ್ಯಾಕೇಜ್ ಘೋಷಿಸಬೇಕು ಎಂದು ರೈತ ಮುಖಂಡರು ಆಗ್ರಹಿಸಿದ್ದಾರೆ.

ಮುಂಗಾರು ಹಂಗಾಮು ಸಂಪೂರ್ಣವಾಗಿ ವಿಫಲವಾಗಿರುವ ಸಂದರ್ಭದಲ್ಲಿ ಮುಂದಿನ ಹಂಗಾಮಿನಲ್ಲಾದರೂ ಉತ್ತಮ ಮಳೆಯಾಗಬಹುದು ಎಂಬ ನಿರೀಕ್ಷೆಯಲ್ಲಿ ರೈತರು ಕಾಯುತ್ತಿದ್ದಾರೆ. ಆದರೆ ಹಿಂಗಾರು ಮಳೆಯೂ ಸಮರ್ಪಕವಾಗಿ ಆಗುವುದಿಲ್ಲ ಎಂಬ ಆತಂಕ ವ್ಯಕ್ತವಾಗುತ್ತಿರುವ ಹಿನ್ನೆಲೆಯಲ್ಲಿ ಸರ್ಕಾರ ಮುನ್ನೆಚ್ಚರಿಕೆ ಕ್ರಮ ಕೈಗೊಂಡು ರೈತರ ನೆರವಿಗೆ ಧಾವಿಸಬೇಕು ಎಂಬ ಒತ್ತಾಯ ಕೇಳಿಬಂದಿದೆ.



“ಎಕರೆಗೆ 20 ಸಾವಿರ ಸಹಾಯಧನ ನೀಡಬೇಕು”


ಮುಂಗಾರು ಮಳೆ ಸಮರ್ಪಕವಾಗಿ ಬಂದಿದ್ದರೆ ರೈತರಿಗೆ ಬೆಳೆ ಬೆಳೆಯಲು ಅನುಕೂಲವಾಗುತ್ತಿತ್ತು. ಆದರೆ ಮಳೆ ಕೊರತೆಯಿಂದ ಈಗಾಗಲೇ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಮುಂದಿನ ಹಂಗಾಮಿನಲ್ಲೂ ಮಳೆ ಸಮರ್ಪಕವಾಗಿ ಬರುವ ಬಗ್ಗೆ ಅನುಮಾನವಿದ್ದು, ಸರ್ಕಾರ ರೈತರ ನೆರವಿಗೆ ವಿಶೇಷ ಕ್ರಮ ಕೈಗೊಳ್ಳಬೇಕು. ಬೆಳೆ ನಷ್ಟಕ್ಕೊಳಗಾದ ರೈತರಿಗೆ ಎಕರೆಗೆ ಕನಿಷ್ಠ 20 ಸಾವಿರ ಸಹಾಯಧನ ನೀಡಬೇಕು.

–– ಕುಮಾರ, ತಾಲೂಕು ಅಧ್ಯಕ್ಷರು, ಕರ್ನಾಟಕ ರಾಜ್ಯ ರೈತ ಸಂಘ, (ವಾಸುದೇವ ಮೇಟಿ ಬಣ)

ದಾಸೋಹ ಮಠದ ಕಲ್ಯಾಣಮಂಟಪ ನಿರ್ಮಾಣಕ್ಕೆ 1 ಲಕ್ಷ ದೇಣಿಗೆ

“ಮುಂಜಾನೆಯ ಮೆರಗು”

ಜಗಳೂರು ಅ, 07– ತಾಲೂಕಿನ ಖಾನಾಮಡುಗಿ ಗ್ರಾಮದ ದಾಸೋಹ ಮಠದಲ್ಲಿ ನೂತನವಾಗಿ ನಿರ್ಮಾಣಗೊಳ್ಳುತ್ತಿರುವ ಕಲ್ಯಾಣಮಂಟಪದ ನಿರ್ಮಾಣ ಕಾರ್ಯಕ್ಕೆ ಸೊಕ್ಕೆ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯರಾದ ಎಸ್.ಕೆ. ಮಂಜುನಾಥ್ ಅವರು 1 ಲಕ್ಷ ದೇಣಿಗೆ ನೀಡಿ, ಧಾರ್ಮಿಕ ಹಾಗೂ ಸಾಮಾಜಿಕ ಕಾರ್ಯಗಳಿಗೆ ತಮ್ಮ ಸಹಕಾರ ವ್ಯಕ್ತಪಡಿಸಿದರು.



ಖಾನಾಮಡುಗಿ ದಾಸೋಹ ಮಠವು ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ಸಮಾಜಮುಖಿ ಚಟುವಟಿಕೆಗಳಿಗೆ ವೇದಿಕೆಯಾಗಿದ್ದು, ಭಕ್ತರು ಹಾಗೂ ಸಾರ್ವಜನಿಕರ ಅನುಕೂಲಕ್ಕಾಗಿ ಕಲ್ಯಾಣಮಂಟಪ ನಿರ್ಮಿಸಲಾಗುತ್ತಿದೆ. ಮಠದ ಅಭಿವೃದ್ಧಿ ಹಾಗೂ ಕಲ್ಯಾಣಮಂಟಪ ನಿರ್ಮಾಣ ಕಾರ್ಯಕ್ಕೆ ಸಾರ್ವಜನಿಕರು, ಭಕ್ತರು ಮತ್ತು ದಾನಿಗಳು ತಮ್ಮ ಕೈಲಾದಷ್ಟು ಸಹಾಯ ನೀಡುವ ಅಗತ್ಯವಿದೆ ಎಂದು ಈ ಸಂದರ್ಭದಲ್ಲಿ ತಿಳಿಸಲಾಯಿತು.

ಕಲ್ಯಾಣಮಂಟಪ ನಿರ್ಮಾಣಕ್ಕೆ 1 ಲಕ್ಷ ದೇಣಿಗೆ ನೀಡಿದ ಎಸ್.ಕೆ. ಮಂಜುನಾಥ್ ಅವರ ಸಾಮಾಜಿಕ ಕಾಳಜಿ ಹಾಗೂ ಸಹಕಾರಕ್ಕೆ ಮಠದ ಆಡಳಿತ ಮಂಡಳಿ ಮತ್ತು ಸ್ಥಳೀಯರು ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಜಗಳೂರು ತಾಲೂಕು ವೀರಶೈವ ಲಿಂಗಾಯತ ಸಮಾಜದ ಅಧ್ಯಕ್ಷ ಅಜ್ಜಯ್ಯ ನಾಡಿಗರ್, ಖಾನಾಮಡುಗಿಯ ನಿವೃತ್ತ ಶಿಕ್ಷಕ ಸೋಮಶೇಖರ್ ಸೇರಿದಂತೆ ಗಣ್ಯರು, ಮುಖಂಡರು, ಭಕ್ತರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ಕಡಲೆ ಬಿತ್ತನೆ ಬೀಜಕ್ಕೆ ಶೇ.50ರವರೆಗೆ ಸಹಾಯಧನ ಆಧಾರ್, ಪಹಣಿ ದಾಖಲೆ ಕಡ್ಡಾಯ: ಶ್ವೇತಾ

“ಮುಂಜಾನೆಯ ಮೆರಗು”

ಜಗಳೂರು ಅ, 07– ಹಿಂಗಾರು ಹಂಗಾಮಿನಲ್ಲಿ ರೈತರು ವಾತಾವರಣದ ಪರಿಸ್ಥಿತಿಯನ್ನು ಗಮನಿಸಿಕೊಂಡು ಸೂಕ್ತ ಸಮಯದಲ್ಲಿ ಬಿತ್ತನೆ ಮಾಡಬೇಕು ಎಂದು ಕೃಷಿ ಇಲಾಖೆಯ ಸಹಾಯಕ ನಿರ್ದೇಶಕಿ ಶ್ವೇತಾ ಸಲಹೆ ನೀಡಿದರು.



ಪಟ್ಟಣದ ಪಿಎಂಸಿ ಆವರಣದಲ್ಲಿರುವ ಗೋದಾಮಿನಲ್ಲಿ ಬುಧವಾರ 2026–27ನೇ ಸಾಲಿನ ಹಿಂಗಾರು ಹಂಗಾಮಿಗೆ ಕಡಲೆ ಬಿತ್ತನೆ ಬೀಜ ವಿತರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಜಗಳೂರು ತಾಲ್ಲೂಕಿನ ಕಸಬಾ, ಬಿಳಿಚೋಡು ಹಾಗೂ ಹೊಸಕೆರೆ ರೈತ ಸಂಪರ್ಕ ಕೇಂದ್ರಗಳ ಮೂಲಕ ಸರ್ಕಾರಿ ಸಹಾಯಧನದಲ್ಲಿ ಕಡಲೆ ಬಿತ್ತನೆ ಬೀಜವನ್ನು ರೈತರಿಗೆ ವಿತರಿಸಲಾಗುತ್ತಿದೆ. ಎಲ್ಲಾ ವರ್ಗದ ರೈತರಿಗೆ ಗರಿಷ್ಠ ಎರಡು ಹೆಕ್ಟೇರ್ ಅಥವಾ ರೈತರ ಹಿಡುವಳಿಯಲ್ಲಿ ಯಾವುದು ಕಡಿಮೆಯೋ ಆ ವಿಸ್ತೀರ್ಣಕ್ಕೆ ಸೀಮಿತವಾಗಿ ಬೀಜ ವಿತರಿಸಲಾಗುವುದು ಎಂದರು.

ರೈತರು ಆಧಾರ್ ಕಾರ್ಡ್, ಪಹಣಿ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತರು ಜಾತಿ ಪ್ರಮಾಣಪತ್ರದ ಪ್ರತಿಯೊಂದಿಗೆ ಖುದ್ದಾಗಿ ರೈತ ಸಂಪರ್ಕ ಕೇಂದ್ರಕ್ಕೆ ಹಾಜರಾಗಿ, ರೈತರ ವಂತಿಕೆ ಪಾವತಿಸಿ ಬಿತ್ತನೆ ಬೀಜ ಪಡೆಯಬಹುದು ಎಂದು ಕೃಷಿ ಇಲಾಖೆ ತಿಳಿಸಿದರು

ತಳಿಗಳ 20 ಕೆ.ಜಿ ಪ್ಯಾಕೆಟ್‌ನ ಪೂರ್ಣ ದರ 1,800 ಆಗಿದ್ದು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತರಿಗೆ 500 ಹಾಗೂ ಸಾಮಾನ್ಯ ವರ್ಗದ ರೈತರಿಗೆ 750 ಸರ್ಕಾರಿ ಸಹಾಯಧನ ಲಭ್ಯವಿದೆ. ಹೀಗಾಗಿ ಎಸ್‌ಸಿ/ಎಸ್‌ಟಿ ರೈತರು 1,300 ಹಾಗೂ ಸಾಮಾನ್ಯ ವರ್ಗದ ರೈತರು 1,050 ರೈತರ ವಂತಿಕೆ ಪಾವತಿಸಿ ಬೀಜ ಪಡೆಯಬಹುದಾಗಿದೆ.

ಹಿಂಗಾರು ಹಂಗಾಮಿನಲ್ಲಿ ಮಳೆ ಹಾಗೂ ಮಣ್ಣಿನ ತೇವಾಂಶದ ಪರಿಸ್ಥಿತಿಯನ್ನು ಗಮನಿಸಿ ಬಿತ್ತನೆ ಕೈಗೊಳ್ಳುವ ಮೂಲಕ ರೈತರು ಅನಗತ್ಯ ನಷ್ಟ ತಪ್ಪಿಸಿಕೊಳ್ಳಬೇಕು ಎಂದು ಅವರು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಕೃಷಿ ಅಧಿಕಾರಿ ಜೀವಿತ, ದೇವರಾಜ್ ಸೇರಿದಂತೆ ಮತ್ತಿತರರು ಹಾಜರಿದ್ದರು

ಜಿಲ್ಲಾಮಟ್ಟದ ಕರಾಟೆಯಲ್ಲಿ ಭುವನಗೆ ಪ್ರಥಮ ಸ್ಥಾನ

ರೈತ ಸಂಘದ ತಾಲೂಕು ಅಧ್ಯಕ್ಷ ಚಿಕ್ಕಮಲ್ಲನಹೊಳೆ ಚಿರಂಜೀವಿ ಪುತ್ರಿಗೆ ರಾಜ್ಯಮಟ್ಟದ ಸ್ಪರ್ಧೆಗೆ ಅವಕಾಶ

“ಮುಂಜಾನೆಯ ಮೆರಗು”

ಜಗಳೂರು ಅ, 07– ದಾವಣಗೆರೆಯಲ್ಲಿ ನಡೆದ ಜಿಲ್ಲಾ ಮಟ್ಟದ ಕರಾಟೆ ಸ್ಪರ್ಧೆಯಲ್ಲಿ ಜಗಳೂರು ತಾಲೂಕಿನ ಚಿಕ್ಕಮಲ್ಲನಹೊಳೆ ಗ್ರಾಮದ ರೈತ ಸಂಘದ ತಾಲೂಕು ಅಧ್ಯಕ್ಷ ಚಿಕ್ಕಮಲ್ಲನಹೊಳೆ ಚಿರಂಜೀವಿ ಅವರ ಪುತ್ರಿ ಸಿ. ಭುವನ ಪ್ರಥಮ ಸ್ಥಾನ ಪಡೆದು ರಾಜ್ಯಮಟ್ಟದ ಕರಾಟೆ ಸ್ಪರ್ಧೆಗೆ ಆಯ್ಕೆಯಾಗುವ ಮೂಲಕ ತಾಲೂಕಿಗೆ ಕೀರ್ತಿ ತಂದಿದ್ದಾಳೆ.

ದಾವಣಗೆರೆಯಲ್ಲಿ ಇತ್ತೀಚೆಗೆ ನಡೆದ ಜಿಲ್ಲಾ ಮಟ್ಟದ ಕರಾಟೆ ಸ್ಪರ್ಧೆಯಲ್ಲಿ ಜಿಲ್ಲೆಯ ವಿವಿಧ ತಾಲೂಕುಗಳಿಂದ ಆಗಮಿಸಿದ್ದ ಪ್ರತಿಭಾವಂತ ಕ್ರೀಡಾಪಟುಗಳು ಭಾಗವಹಿಸಿದ್ದರು. ಸ್ಪರ್ಧೆಯಲ್ಲಿ ಭುವನ ತನ್ನ ಉತ್ತಮ ತಾಂತ್ರಿಕ ಕೌಶಲ, ಆತ್ಮವಿಶ್ವಾಸ ಹಾಗೂ ಸಮಯಪ್ರಜ್ಞೆಯನ್ನು ಪ್ರದರ್ಶಿಸಿ ಎದುರಾಳಿಗಳನ್ನು ಮಣಿಸಿ ಪ್ರಥಮ ಸ್ಥಾನ ಗಳಿಸಿದ್ದಾಳೆ.



ಭುವನನ ಸಾಧನೆಯಿಂದ ಚಿಕ್ಕಮಲ್ಲನಹೊಳೆ ಗ್ರಾಮ ಸೇರಿದಂತೆ ಜಗಳೂರು ತಾಲೂಕಿನ ಕ್ರೀಡಾಭಿಮಾನಿಗಳಲ್ಲಿ ಸಂತಸ ವ್ಯಕ್ತವಾಗಿದೆ. ಗ್ರಾಮೀಣ ಪ್ರದೇಶದ ವಿದ್ಯಾರ್ಥಿನಿಯಾಗಿದ್ದರೂ ಕ್ರೀಡೆಯಲ್ಲಿ ಆಸಕ್ತಿ ಬೆಳೆಸಿಕೊಂಡು ನಿರಂತರ ಅಭ್ಯಾಸದ ಮೂಲಕ ಜಿಲ್ಲಾ ಮಟ್ಟದಲ್ಲಿ ಗಮನಾರ್ಹ ಸಾಧನೆ ಮಾಡಿರುವುದು ಇತರ ವಿದ್ಯಾರ್ಥಿಗಳಿಗೆ ಪ್ರೇರಣೆಯಾಗಿದೆ.

ಜಿಲ್ಲಾಮಟ್ಟದಲ್ಲಿ ಪ್ರಥಮ ಸ್ಥಾನ ಗಳಿಸಿರುವ ಭುವನ ಇದೀಗ ರಾಜ್ಯಮಟ್ಟದ ಕರಾಟೆ ಸ್ಪರ್ಧೆಗೆ ಅರ್ಹತೆ ಪಡೆದಿದ್ದು, ಮುಂದಿನ ಹಂತದಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸುವ ಕ್ರೀಡಾಪಟುಗಳೊಂದಿಗೆ ಸ್ಪರ್ಧಿಸಲಿದ್ದಾಳೆ. ರಾಜ್ಯಮಟ್ಟದಲ್ಲಿಯೂ ಉತ್ತಮ ಪ್ರದರ್ಶನ ನೀಡಿ ತಾಲೂಕು ಹಾಗೂ ಜಿಲ್ಲೆಗೆ ಕೀರ್ತಿ ತರಲಿ ಎಂದು ಗ್ರಾಮಸ್ಥರು ಹಾಗೂ ಹಿತೈಷಿಗಳು ಶುಭ ಹಾರೈಸಿದ್ದಾರೆ.

ಭುವನನ ಸಾಧನೆಗೆ ತಂದೆ ಚಿರಂಜೀವಿ ಸೇರಿದಂತೆ ಕುಟುಂಬದ ಸದಸ್ಯರು, ಶಿಕ್ಷಕರು, ತರಬೇತುದಾರರು ಹಾಗೂ ಗ್ರಾಮಸ್ಥರು ಅಭಿನಂದನೆ ಸಲ್ಲಿಸಿದ್ದಾರೆ. ಗ್ರಾಮೀಣ ಭಾಗದಲ್ಲಿರುವ ಮಕ್ಕಳಲ್ಲಿಯೂ ಕ್ರೀಡಾ ಪ್ರತಿಭೆ ಸಾಕಷ್ಟಿದ್ದು, ಅವರಿಗೆ ಸೂಕ್ತ ತರಬೇತಿ, ಪ್ರೋತ್ಸಾಹ ಮತ್ತು ಅಗತ್ಯ ಸೌಲಭ್ಯಗಳನ್ನು ಒದಗಿಸಿದರೆ ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ಸಾಧನೆ ಮಾಡಲು ಸಾಧ್ಯ ಎಂಬುದಕ್ಕೆ ಭುವನನ ಸಾಧನೆ ಉತ್ತಮ ಉದಾಹರಣೆಯಾಗಿದೆ.

18 ವಾರ್ಡ್‌ಗಳಲ್ಲೂ ಹಂದಿ, ಬೀದಿ ನಾಯಿಗಳದ್ದೇ ಕಾರುಬಾರು

ಸಾರ್ವಜನಿಕರ ಸುರಕ್ಷತೆಗೆ ಪಟ್ಟಣ ಪಂಚಾಯಿತಿ ತುರ್ತು ಕ್ರಮ ಕೈಗೊಳ್ಳಲಿ

“ಮುಂಜಾನೆಯ ಮೆರಗು”

ಜಗಳೂರು ಅ, 07– ಪಟ್ಟಣದ 28 ವಾರ್ಡ್‌ಗಳಲ್ಲಿ ಹಂದಿ ಹಾಗೂ ಬೀದಿ ನಾಯಿಗಳ ಹಾವಳಿ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು, ಸಾರ್ವಜನಿಕರು ಆತಂಕದಿಂದ ಸಂಚರಿಸುವ ಪರಿಸ್ಥಿತಿ ನಿರ್ಮಾಣವಾಗಿದೆ. ಪಟ್ಟಣ ಪಂಚಾಯಿತಿ ಅಧಿಕಾರಿಗಳು ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ ಹಂದಿ ಹಾಗೂ ಬೀದಿ ನಾಯಿಗಳ ನಿಯಂತ್ರಣಕ್ಕೆ ಶಾಶ್ವತ ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

ಪಟ್ಟಣದ ವಿವಿಧ ಬಡಾವಣೆಗಳು, ಮುಖ್ಯ ರಸ್ತೆಗಳು, ವಸತಿ ಪ್ರದೇಶಗಳು, ಶಾಲಾ–ಕಾಲೇಜುಗಳ ಸುತ್ತಮುತ್ತ ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಓಡಾಡುವ ಸ್ಥಳಗಳಲ್ಲಿ ಬೀದಿ ನಾಯಿಗಳ ಗುಂಪುಗಳು ಕಾಣಿಸಿಕೊಳ್ಳುತ್ತಿವೆ. ರಾತ್ರಿ ವೇಳೆಯಲ್ಲಿ ಗುಂಪು ಗುಂಪಾಗಿ ಸಂಚರಿಸುವ ನಾಯಿಗಳಿಂದ ದ್ವಿಚಕ್ರ ವಾಹನ ಸವಾರರು ಹಾಗೂ ಪಾದಚಾರಿಗಳು ತೊಂದರೆ ಅನುಭವಿಸುತ್ತಿದ್ದಾರೆ.

ಇದರ ಜೊತೆಗೆ ಹಲವು ವಾರ್ಡ್‌ಗಳಲ್ಲಿ ಹಂದಿಗಳ ಹಾವಳಿಯೂ ಹೆಚ್ಚಾಗಿದೆ. ಮನೆಗಳ ಸುತ್ತಮುತ್ತ, ರಸ್ತೆ ಬದಿಯಲ್ಲಿ ಹಾಗೂ ಚರಂಡಿ ಪ್ರದೇಶಗಳಲ್ಲಿ ಹಂದಿಗಳು ಅಡ್ಡಾಡುತ್ತಿರುವುದರಿಂದ ಸ್ವಚ್ಛತೆ ಹಾಗೂ ಸಾರ್ವಜನಿಕ ಆರೋಗ್ಯದ ಕುರಿತು ಆತಂಕ ವ್ಯಕ್ತವಾಗಿದೆ. ಕಸವನ್ನು ಎಲ್ಲೆಂದರಲ್ಲಿ ಎಸೆಯುವುದರಿಂದ ಹಂದಿಗಳು ಹಾಗೂ ಬೀದಿ ನಾಯಿಗಳು ಹೆಚ್ಚಿನ ಸಂಖ್ಯೆಯಲ್ಲಿ ಸೇರುವಂತಾಗಿದೆ ಎಂಬ ಆರೋಪವೂ ಸಾರ್ವಜನಿಕರಿಂದ ಕೇಳಿಬಂದಿದೆ.

ಮಕ್ಕಳು, ವೃದ್ಧರಿಗೆ ಆತಂಕ

ಬೀದಿ ನಾಯಿಗಳ ಹಾವಳಿಯಿಂದ ವಿಶೇಷವಾಗಿ ಮಕ್ಕಳು ಹಾಗೂ ವೃದ್ಧರು ಆತಂಕದಿಂದ ಓಡಾಡುವಂತಾಗಿದೆ. ನಾಯಿಗಳ ಗುಂಪುಗಳು ಏಕಾಏಕಿ ವಾಹನಗಳ ಹಿಂದೆ ಓಡುವುದರಿಂದ ದ್ವಿಚಕ್ರ ವಾಹನ ಸವಾರರು ನಿಯಂತ್ರಣ ತಪ್ಪುವ ಸಾಧ್ಯತೆಯಿದೆ. ಅಲ್ಲದೆ, ನಾಯಿ ಕಡಿತದಂತಹ ಘಟನೆಗಳು ಸಂಭವಿಸುವ ಮುನ್ನವೇ ಪಟ್ಟಣ ಪಂಚಾಯಿತಿ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

ಹಂದಿಗಳ ಹಾವಳಿಯಿಂದ ರಸ್ತೆ ಹಾಗೂ ಸಾರ್ವಜನಿಕ ಸ್ಥಳಗಳ ಸ್ವಚ್ಛತೆ ಹದಗೆಡುತ್ತಿದ್ದು, ಸಾಂಕ್ರಾಮಿಕ ರೋಗಗಳ ಹರಡುವಿಕೆಯ ಆತಂಕವೂ ಎದುರಾಗಿದೆ. ಪಟ್ಟಣದ ಎಲ್ಲಾ 18 ವಾರ್ಡ್‌ಗಳಲ್ಲಿ ಸಮಸ್ಯೆ ಇರುವ ಪ್ರದೇಶಗಳನ್ನು ಗುರುತಿಸಿ ಹಂತ ಹಂತವಾಗಿ ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರು ಮನವಿ ಮಾಡಿದ್ದಾರೆ.

ಕಸ ವಿಲೇವಾರಿ ವ್ಯವಸ್ಥೆ ಸುಧಾರಿಸಲಿ

ಪಟ್ಟಣದಲ್ಲಿ ಕಸ ವಿಲೇವಾರಿ ವ್ಯವಸ್ಥೆಯನ್ನು ಮತ್ತಷ್ಟು ಪರಿಣಾಮಕಾರಿಯಾಗಿ ಜಾರಿಗೊಳಿಸುವ ಅಗತ್ಯವಿದೆ. ರಸ್ತೆ ಬದಿ ಹಾಗೂ ಖಾಲಿ ಜಾಗಗಳಲ್ಲಿ ಕಸ ಸಂಗ್ರಹವಾಗದಂತೆ ನೋಡಿಕೊಳ್ಳುವುದರ ಜೊತೆಗೆ, ಸಾರ್ವಜನಿಕರು ಎಲ್ಲೆಂದರಲ್ಲಿ ಕಸ ಹಾಕದಂತೆ ಜಾಗೃತಿ ಮೂಡಿಸಬೇಕು. ಹಂದಿ ಹಾಗೂ ಬೀದಿ ನಾಯಿಗಳ ಹಾವಳಿಗೆ ಕಾರಣವಾಗುವ ಅಂಶಗಳನ್ನು ಗುರು

ಸೇವಾ ಸಂಕಲ್ಪ ಅಭಿಯಾನ: ಹೊನ್ನಾಳಿಯಲ್ಲಿ ಸಸಿ ನೆಟ್ಟು ಪರಿಸರ ಸಂರಕ್ಷಣೆಗೆ ಸಂಕಲ್ಪ

"ಮುಂಜಾನೆಯ ಮೆರಗು"

ಹೊನ್ನಾಳಿ ಅ, 07– ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ 25 ವರ್ಷಗಳ ಸಾರ್ವಜನಿಕ ಸೇವೆಯ ಪಯಣ ಹಾಗೂ ವಿಕಸಿತ ಭಾರತ ನಿರ್ಮಾಣದ ಸಂಕಲ್ಪವನ್ನು ಸ್ಮರಿಸುವ ಹಿನ್ನೆಲೆಯಲ್ಲಿ ಹೊನ್ನಾಳಿಯಲ್ಲಿ 'ಸೇವಾ ಸಂಕಲ್ಪ ಅಭಿಯಾನ'ದ ಅಂಗವಾಗಿ ಪರಿಸರ ಸಂರಕ್ಷಣಾ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಹೊನ್ನಾಳಿ ನಗರದ ಹಿರೇಮಠ ಶ್ರೀ ಚನ್ನೇಶ್ವರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ಮಾಜಿ ಸಚಿವ ಎಂ.ಪಿ. ರೇಣುಕಾಚಾರ್ಯ ಅವರು ಐದು ಸಸಿಗಳನ್ನು ನೆಟ್ಟು ಪರಿಸರ ಸಂರಕ್ಷಣೆಗೆ ಸಂಕಲ್ಪ ಕೈಗೊಂಡರು.



ಈ ಸಂದರ್ಭದಲ್ಲಿ ಮಾತನಾಡಿದ ರೇಣುಕಾಚಾರ್ಯ, ಪ್ರಕೃತಿ ಹಾಗೂ ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಮುಂದಿನ ಪೀಳಿಗೆಗೆ ಹಸಿರು ಹಾಗೂ ಸುಸ್ಥಿರ ಪರಿಸರವನ್ನು ಉಳಿಸಿಕೊಡುವ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಸಸಿ ನೆಟ್ಟು, ಅವುಗಳ ಸಂರಕ್ಷಣೆಗೆ ಮುಂದಾಗಬೇಕು ಎಂದು ಹೇಳಿದರು.

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಸಾರ್ವಜನಿಕ ಸೇವೆಯ 25 ವರ್ಷಗಳ ಪಯಣವನ್ನು ಸ್ಮರಿಸುವ 'ಸೇವಾ ಸಂಕಲ್ಪ ಅಭಿಯಾನ'ದ ಮೂಲಕ ವಿವಿಧ ಸಮಾಜಮುಖಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಪರಿಸರ ಸಂರಕ್ಷಣೆಯಂತಹ ಜನಪರ ಕಾರ್ಯಗಳ ಮೂಲಕ ಸಮಾಜದಲ್ಲಿ ಜಾಗೃತಿ ಮೂಡಿಸುವುದು ಅಭಿಯಾನದ ಉದ್ದೇಶವಾಗಿದೆ ಎಂದು ತಿಳಿಸಿದರು.

ಸಸಿ ನೆಡುವುದಷ್ಟೇ ಅಲ್ಲದೆ, ನೆಟ್ಟ ಸಸಿಗಳನ್ನು ನಿರಂತರವಾಗಿ ಪೋಷಿಸಿ ಬೆಳೆಸುವ ಜವಾಬ್ದಾರಿಯನ್ನು ಎಲ್ಲರೂ ವಹಿಸಿಕೊಳ್ಳಬೇಕು. ಪರಿಸರದ ಸಮತೋಲನ ಕಾಪಾಡಲು ಹಸಿರು ಹೆಚ್ಚಿಸುವುದು ಇಂದಿನ ಅಗತ್ಯವಾಗಿದೆ ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಮಂಡಲ ಅಧ್ಯಕ್ಷರು, ಬಿಜೆಪಿ ಮುಖಂಡರು, ಕಾರ್ಯಕರ್ತರು ಹಾಗೂ ಸ್ಥಳೀಯರು ಉಪಸ್ಥಿತರಿದ್ದರು.

ಕೆ.ಎಂ. ಸುರೇಶ್‌ರಿಂದ ಬಿ.ಎಸ್. ಯಡಿಯೂರಪ್ಪ ಭೇಟಿ

ಚುನಾವಣಾ ಪ್ರಚಾರ, ಪಕ್ಷ ಸಂಘಟನೆ ಕುರಿತು ಸಮಾಲೋಚನೆ



"ಮುಂಜಾನೆಯ ಮೆರಗು"

ಬೆಂಗಳೂರು ಅ, 07– ಮುಂಬರುವ ಆಗ್ನೇಯ ಪದವೀಧರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆಯ ಹಿನ್ನೆಲೆಯಲ್ಲಿ ಎನ್‌ಡಿಎ ಅಭ್ಯರ್ಥಿ ಕೆ.ಎಂ. ಸುರೇಶ್ ಅವರು ಬಿಜೆಪಿ ಹಿರಿಯ ನಾಯಕ ಹಾಗೂ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರನ್ನು ಭೇಟಿ ಮಾಡಿ ಆಶೀರ್ವಾದ ಪಡೆದರು.

ಈ ಸಂದರ್ಭದಲ್ಲಿ ಆಗ್ನೇಯ ಪದವೀಧರ ಕ್ಷೇತ್ರದಲ್ಲಿ ನಡೆಯುತ್ತಿರುವ ಚುನಾವಣಾ ಪ್ರಚಾರ, ಪದವೀಧರ ಮತದಾರರ ಸ್ಪಂದನೆ ಹಾಗೂ ಪಕ್ಷ ಸಂಘಟನೆಗೆ ಸಂಬಂಧಿಸಿದ ಬೆಳವಣಿಗೆಗಳ ಕುರಿತು ಬಿ.ಎಸ್. ಯಡಿಯೂರಪ್ಪ ಅವರೊಂದಿಗೆ ಸಮಾಲೋಚನೆ ನಡೆಸಿದರು.

ಬಿ.ಎಸ್. ಯಡಿಯೂರಪ್ಪ ಅವರ ದೀರ್ಘಕಾಲದ ರಾಜಕೀಯ ಅನುಭವ ಹಾಗೂ ಮಾರ್ಗದರ್ಶನ ಚುನಾವಣಾ ಕಾರ್ಯತಂತ್ರ ರೂಪಿಸಲು ನೆರವಾಗಲಿದೆ ಎಂದು ಕೆ.ಎಂ. ಸುರೇಶ್ ತಿಳಿಸಿದರು.

ಕ್ಷೇತ್ರದಾದ್ಯಂತ ಪದವೀಧರರನ್ನು ಸಂಪರ್ಕಿಸಿ, ಅವರ ಸಮಸ್ಯೆಗಳು ಹಾಗೂ ನಿರೀಕ್ಷೆಗಳನ್ನು ಆಲಿಸುವ ಮೂಲಕ ಚುನಾವಣಾ ಪ್ರಚಾರವನ್ನು ಮುಂದುವರಿಸಲಾಗುತ್ತಿದೆ ಎಂದು ಹೇಳಿದರು.

ಬಿಜೆಪಿ–ಜೆಡಿಎಸ್ ಮೈತ್ರಿಕೂಟದ ಮುಖಂಡರು ಹಾಗೂ ಕಾರ್ಯಕರ್ತರು ಒಗ್ಗಟ್ಟಿನಿಂದ ಚುನಾವಣಾ ಪ್ರಚಾರದಲ್ಲಿ ತೊಡಗಿಸಿಕೊಂಡಿದ್ದು, ಆಗ್ನೇಯ ಪದವೀಧರ ಕ್ಷೇತ್ರದ ಮತದಾರರನ್ನು ತಲುಪುವ ನಿಟ್ಟಿನಲ್ಲಿ ವಿವಿಧ ಹಂತಗಳಲ್ಲಿ ಸಭೆ ಹಾಗೂ ಸಂವಾದ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಬಿ.ಎಸ್. ಯಡಿಯೂರಪ್ಪ ಅವರು ಕೆ.ಎಂ. ಸುರೇಶ್ ಅವರಿಗೆ ಶುಭ ಹಾರೈಸಿ, ಚುನಾವಣಾ ಪ್ರಚಾರ ಹಾಗೂ ಸಂಘಟನಾ ಚಟುವಟಿಕೆಗಳ ಕುರಿತು ಸಲಹೆ–ಮಾರ್ಗದರ್ಶನ ನೀಡಿದರು.

ಸೇವಾ ಸಂಕಲ್ಪ ಅಭಿಯಾನಕ್ಕೆ ಬೆಂಗಳೂರಿನಲ್ಲಿ ಸಮಾರೋಪ

ವಿಕಸಿತ ಭಾರತ ನಿರ್ಮಾಣಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕು: ಬಿ.ಎಸ್. ಯಡಿಯೂರಪ್ಪ

"ಮುಂಜಾನೆಯ ಮೆರಗು"

ಬೆಂಗಳೂರು ಅ, 07– ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ 25 ವರ್ಷಗಳ ಸಾರ್ವಜನಿಕ ಸೇವೆಯನ್ನು ಸ್ಮರಿಸುವ ಹಿನ್ನೆಲೆಯಲ್ಲಿ ಹಮ್ಮಿಕೊಂಡಿರುವ 'ಸೇವಾ ಸಂಕಲ್ಪ ಅಭಿಯಾನ'ದ ಅಂಗವಾಗಿ ಬೆಂಗಳೂರಿನಲ್ಲಿ ಆಯೋಜಿಸಿದ್ದ 'ಸೇವಾ ಜ್ಯೋತಿ ಯಾತ್ರೆ'ಯ ಸಮಾರೋಪ ಸಮಾರಂಭದಲ್ಲಿ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಮಾತನಾಡಿದರು.

ಡಾ. ಎಂ.ಸಿ. ಮೋದಿ ಆಸ್ಪತ್ರೆ ರಸ್ತೆಯಲ್ಲಿರುವ ಶಂಕರಮಠ ಆಟದ ಮೈದಾನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಯಡಿಯೂರಪ್ಪ, ದೇಶದ ಅಭಿವೃದ್ಧಿಯನ್ನು ಮತ್ತಷ್ಟು ವೇಗಗೊಳಿಸಿ ವಿಕಸಿತ ಭಾರತ ನಿರ್ಮಾಣ ಮಾಡುವ ಸಂಕಲ್ಪವನ್ನು ಸಾಕಾರಗೊಳಿಸುವ ನಿಟ್ಟಿನಲ್ಲಿ ಪ್ರತಿಯೊಬ್ಬರೂ ತಮ್ಮ ಜವಾಬ್ದಾರಿಯನ್ನು ಅರಿತು ಕಾರ್ಯನಿರ್ವಹಿಸಬೇಕು ಎಂದು ಕರೆ ನೀಡಿದರು.



ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ 25 ವರ್ಷಗಳ ಸಾರ್ವಜನಿಕ ಸೇವೆಯನ್ನು ಸ್ಮರಿಸುವ ಉದ್ದೇಶದಿಂದ 'ಸೇವಾ ಸಂಕಲ್ಪ ಅಭಿಯಾನ'ದಡಿ ವಿವಿಧ ಸಮಾಜಮುಖಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಸೇವೆ ಮತ್ತು ಜನಪರ ಕಾರ್ಯಗಳ ಮೂಲಕ ಸಮಾಜದಲ್ಲಿ ಸಕಾರಾತ್ಮಕ ಬದಲಾವಣೆ ತರುವ ನಿಟ್ಟಿನಲ್ಲಿ ಇಂತಹ ಕಾರ್ಯಕ್ರಮಗಳು ಮಹತ್ವದ್ದಾಗಿವೆ ಎಂದು ಅವರು ಹೇಳಿದರು.

ಯುವಜನತೆ ದೇಶದ ಭವಿಷ್ಯವಾಗಿದ್ದು, ಅವರನ್ನು ಮಾದಕ ವಸ್ತುಗಳ ಚಟದಿಂದ ದೂರವಿಡುವುದು ಸಮಾಜದ ಎಲ್ಲರ ಜವಾಬ್ದಾರಿಯಾಗಿದೆ. ಈ ನಿಟ್ಟಿನಲ್ಲಿ 'ನಶಾ ಮುಕ್ತ ಭಾರತ' ಅಭಿಯಾನಕ್ಕೆ ಹೆಚ್ಚಿನ ಜನಬೆಂಬಲ ದೊರೆಯಬೇಕು. ಆರೋಗ್ಯಕರ ಹಾಗೂ ಮಾದಕ ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಎಲ್ಲರೂ ಕೈಜೋಡಿಸಬೇಕು ಎಂದು ಯಡಿಯೂರಪ್ಪ ಕರೆ ನೀಡಿದರು.

ಕಾರ್ಯಕ್ರಮದಲ್ಲಿ ವಿಕಸಿತ ಭಾರತ ನಿರ್ಮಾಣಕ್ಕಾಗಿ ಸಾಮೂಹಿಕ ಪ್ರತಿಜ್ಞೆ ಸ್ವೀಕರಿಸಲಾಯಿತು. ಬಳಿಕ ಯಡಿಯೂರಪ್ಪ ಅವರು 'ನಶಾ ಮುಕ್ತ ಭಾರತ' ಅಭಿಯಾನಕ್ಕೆ ಚಾಲನೆ ನೀಡಿದರು.

ಕೇಂದ್ರ ಸಚಿವರಾದ ಶೋಭಾ ಕರಂದ್ಲಾಜೆ, ಮಾಜಿ ಉಪಮುಖ್ಯಮಂತ್ರಿ ಡಾ. ಸಿ.ಎನ್. ಅಶ್ವತ್ಥನಾರಾಯಣ, ಮಾಜಿ ಸಚಿವರಾದ ಕೆ. ಗೋಪಾಲಯ್ಯ, ಎಸ್. ಸುರೇಶ್ ಕುಮಾರ್, ಸಂಸದರಾದ ಪಿ.ಸಿ. ಮೋಹನ್, ತೇಜಸ್ವಿ ಸೂರ್ಯ, ಜಗ್ಗೇಶ್, ಶಾಸಕರಾದ ಸಿ.ಕೆ. ರಾಮಮೂರ್ತಿ, ಎಸ್. ರಘು, ವಿಧಾನ ಪರಿಷತ್ ಸದಸ್ಯ ಕೇಶವ ಪ್ರಸಾದ್, ಮಾಜಿ ವಿಧಾನ ಪರಿಷತ್ ಸದಸ್ಯ ಎಂ.ಡಿ. ಲಕ್ಷ್ಮೀನಾರಾಯಣ, ಬೆಂಗಳೂರು ಉತ್ತರ ಜಿಲ್ಲಾಧ್ಯಕ್ಷ ಎಸ್. ಹರೀಶ್, ಬೆಂಗಳೂರು ಕೇಂದ್ರ ಜಿಲ್ಲಾಧ್ಯಕ್ಷ ಸಪ್ತಗಿರಿ ಗೌಡ ಸೇರಿದಂತೆ ಪಕ್ಷದ ಪದಾಧಿಕಾರಿಗಳು ಹಾಗೂ ಮುಖಂಡರು ಉಪಸ್ಥಿತರಿದ್ದರು.

ಸ್ಥಳೀಯ ಸಮಸ್ಯೆಗಳಿಗೆ ಸ್ಥಳೀಯ ಪರಿಹಾರ ಅಗತ್ಯ: ಡಾ. ಹರೀಶ್ ಹಂದೆ



"ಮುಂಜಾನೆಯ ಮೆರಗು"

ದಾವಣಗೆರೆ ಅ, 07– ಭಾರತದ ಸಮಸ್ಯೆಗಳನ್ನು ಕೇವಲ ಸಮಸ್ಯೆಗಳಾಗಿ ನೋಡದೆ, ಸಂಶೋಧನೆ, ತಂತ್ರಜ್ಞಾನ ಹಾಗೂ ನವೀನತೆಯ ಮೂಲಕ ಅಭಿವೃದ್ಧಿಯ ಅವಕಾಶಗಳಾಗಿ ಪರಿವರ್ತಿಸಬೇಕು ಎಂದು ಡಾ. ಹರೀಶ್ ಹಂದೆ ಹೇಳಿದರು.

ದಾವಣಗೆರೆ ವಿಶ್ವವಿದ್ಯಾಲಯದ ಸಮಾಜಕಾರ್ಯ ವಿಭಾಗ ಹಾಗೂ ಇಂಡಿಯನ್ ಸೊಸೈಟಿ ಆಫ್ ಪ್ರೊಫೆಷನಲ್ ಸೋಷಿಯಲ್ ವರ್ಕ್ ಸಹಯೋಗದಲ್ಲಿ ಬುಧವಾರ ಆರಂಭವಾದ ಮೂರು ದಿನಗಳ ರಾಷ್ಟ್ರೀಯ ಸಮ್ಮೇಳನವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸ್ಥಳೀಯ ಸಮಸ್ಯೆಗಳಿಗೆ ಅಲ್ಲಿನ ಪರಿಸ್ಥಿತಿಗೆ ತಕ್ಕಂತೆ ಪರಿಹಾರ ರೂಪಿಸಬೇಕು. ದಾವಣಗೆರೆ, ಚಿತ್ರದುರ್ಗ, ರಾಯಚೂರು ಸೇರಿದಂತೆ ವಿವಿಧ ಪ್ರದೇಶಗಳ ಸಮಸ್ಯೆಗಳನ್ನು ತಂತ್ರಜ್ಞಾನ ಮತ್ತು ಹೊಸ ವಿನ್ಯಾಸಗಳ ಮೂಲಕ ಪರಿಹರಿಸುವ ಅಗತ್ಯವಿದೆ ಎಂದರು.

ವಿದ್ಯಾರ್ಥಿಗಳು ಪದವಿಗೆ ಸೀಮಿತವಾಗದೆ ಕ್ಷೇತ್ರಮಟ್ಟದಲ್ಲಿ ಕೆಲಸ ಮಾಡಿ, ರೈತರು, ಕಾರ್ಮಿಕರು, ಗ್ರಾಮೀಣ ಹಾಗೂ ಅಂಚಿನ ಸಮುದಾಯಗಳ ಜೀವನವನ್ನು ಅರ್ಥಮಾಡಿಕೊಳ್ಳಬೇಕು. ಸಮಾಜದೊಂದಿಗೆ ಬೆರೆತು ಕಾರ್ಯನಿರ್ವಹಿಸಿದಾಗ ಮಾತ್ರ ಪರಿಣಾಮಕಾರಿ ಸಾಮಾಜಿಕ ಕಾರ್ಯ ಸಾಧ್ಯ ಎಂದು ಹೇಳಿದರು.

ಹವಾಮಾನ ಬದಲಾವಣೆಯ ಹಿನ್ನೆಲೆಯಲ್ಲಿ ಕಡಿಮೆ ವೆಚ್ಚದ, ಸುಸ್ಥಿರ ಮನೆಗಳು ಹಾಗೂ ಕಟ್ಟಡ ವಿನ್ಯಾಸಗಳನ್ನು ಅಭಿವೃದ್ಧಿಪಡಿಸಬೇಕು. ಗ್ರಾಮೀಣ ಮತ್ತು ಬುಡಕಟ್ಟು ಸಮುದಾಯಗಳ ಸಾಂಪ್ರದಾಯಿಕ ಜ್ಞಾನವನ್ನು ತಂತ್ರಜ್ಞಾನ ಹಾಗೂ ಕೃತಕ ಬುದ್ಧಿಮತ್ತೆ ಬಳಸಿ ದಾಖಲಿಸಿ ಸಂರಕ್ಷಿಸುವ ಅಗತ್ಯವಿದೆ ಎಂದರು.

ಪ್ರೋ ಪಶಿಮ್ ತಿವಾರಿ ಮಾತನಾಡಿ "ಪ್ರಸ್ತುತ ನಗರ ಪ್ರದೇಶಗಳಲ್ಲಿ ದೇಶದ ಸುಮಾರು ಶೇ.37ರಷ್ಟು ಜನಸಂಖ್ಯೆ ವಾಸಿಸುತ್ತಿದ್ದು, ಉಳಿದ ಶೇ.63ರಷ್ಟು ಜನರು ಗ್ರಾಮೀಣ ಪ್ರದೇಶಗಳಲ್ಲಿ ವಾಸಿಸುತ್ತಿದ್ದಾರೆ. ಆದರೆ ಈ ಜನಸಂಖ್ಯೆಯ ಸ್ವರೂಪ ಅತ್ಯಂತ ವೇಗವಾಗಿ ಬದಲಾಗುತ್ತಿದೆ. ಮುಂದಿನ ಜನಗಣತಿಯ ವೇಳೆಗೆ ನಗರ ಪ್ರದೇಶಗಳ ಜನಸಂಖ್ಯೆ ಶೇ.40 ಅಥವಾ ಅದಕ್ಕಿಂತಲೂ ಹೆಚ್ಚಾಗುವ ಸಾಧ್ಯತೆಯಿದೆ. ಕಳೆದ ಹಲವು ವರ್ಷಗಳಿಂದ ಗ್ರಾಮೀಣ ಪ್ರದೇಶಗಳಿಂದ ನಗರಗಳಿಗೆ ದೊಡ್ಡ ಪ್ರಮಾಣದಲ್ಲಿ ವಲಸೆ ನಡೆಯುತ್ತಿದ್ದು, ಅದು ನಿರಂತರವಾಗಿ ಹೆಚ್ಚಾಗುತ್ತಿದೆ.

ಇಂತಹ ಸಂದರ್ಭದಲ್ಲಿ ಕೆಳಹಂತದಿಂದ ಮೇಲ್ಮಟ್ಟಕ್ಕೆ ಹರಿಯುವ ಮಾಹಿತಿಯಲ್ಲೇ ವ್ಯತ್ಯಾಸ ಅಥವಾ ದೋಷ ಉಂಟಾದರೆ, ಮೇಲ್ಮಟ್ಟದಲ್ಲಿ ಕೈಗೊಳ್ಳುವ ನಿರ್ಧಾರಗಳೂ ತಪ್ಪಾಗುವ ಸಾಧ್ಯತೆ ಇರುತ್ತದೆ. ಪರಿಣಾಮವಾಗಿ ಸರ್ಕಾರದ ಯೋಜನೆಗಳು ನಿರೀಕ್ಷಿತ ಫಲಿತಾಂಶ ನೀಡದೆ ವಿಫಲವಾಗಬಹುದು ಎಂದರು.

ಈ ಸಂದರ್ಭದಲ್ಲಿ ದಾವಣಗೆರೆ ವಿಶ್ವವಿದ್ಯಾಲಯದ ಕುಲಪತಿ ಬಿ.ಎಫ್. ರಂಗಸ್ವಾಮಿ, ಸೇರಿದಂತೆ ಇತರೆ ಗಣ್ಯರು ಮಾತನಾಡಿದರು.

ಕಾರ್ಯಕ್ರಮ ದಲ್ಲಿ ವಿಶ್ವ ವಿದ್ಯಾಲಯದ ಪತ್ರಿಕೋದ್ಯಮ ಮತ್ತು ಸಂವಹನ ವಿಭಾಗದ ಮುಖ್ಯಸ್ಥ ಶಿವಕುಮಾರ ಕಳಸೋಗಿ, ಸಮ್ಮೇಳನದಲ್ಲಿ ಇತರರು ಹಾಜರಿದ್ದರು.

ಕೊಪ್ಪಳದಲ್ಲಿ 'ವಿಕಸಿತ ಭಾರತ ಸಂಕಲ್ಪ ಸಭೆ': ಸೇವಾ ಜ್ಯೋತಿ ಯಾತ್ರೆಯಲ್ಲಿ ಗಾಲಿ ಜನಾರ್ದನ ರೆಡ್ಡಿ ಭಾಗಿ

"ಮುಂಜಾನೆಯ ಮೆರಗು"

ಕೊಪ್ಪಳ ಅ, 07– ಬಿಜೆಪಿ ಜಿಲ್ಲಾ ಘಟಕದ ವತಿಯಿಂದ ಕೊಪ್ಪಳದ ಶ್ರೀ ಶಿವಶಾಂತವೀರ ಮಂಗಳ ಭವನದಲ್ಲಿ 'ವಿಕಸಿತ ಭಾರತ ಸಂಕಲ್ಪ ಸಭೆ' ಆಯೋಜಿಸಲಾಗಿತ್ತು. ಸಭೆಯಲ್ಲಿ ಶಾಸಕ ಗಾಲಿ ಜನಾರ್ದನ ರೆಡ್ಡಿ ಭಾಗವಹಿಸಿ ಮಾತನಾಡಿದರು.

ಸಭೆಯಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಸಂದೇಶವನ್ನು ವಿಡಿಯೋ ಕಾನ್ಫರೆನ್ಸ್ ಮೂಲಕ ವೀಕ್ಷಿಸಲಾಯಿತು. ಪ್ರಧಾನಮಂತ್ರಿಯವರ 25 ವರ್ಷಗಳ ಸಾರ್ವಜನಿಕ ಸೇವೆ ಹಾಗೂ ವಿಕಸಿತ ಭಾರತ ನಿರ್ಮಾಣದ ಸಂಕಲ್ಪದ ಕುರಿತು ಸಂದೇಶವನ್ನು ಕಾರ್ಯಕರ್ತರು ವೀಕ್ಷಿಸಿ, ಕಾರ್ಯಕ್ರಮದ ಆಶಯಗಳಿಗೆ ಬೆಂಬಲ ವ್ಯಕ್ತಪಡಿಸಿದರು.

ಬಳಿಕ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ 25 ವರ್ಷಗಳ ಸಾರ್ವಜನಿಕ ಸೇವೆಯನ್ನು ಸ್ಮರಿಸುವ ಹಿನ್ನೆಲೆಯಲ್ಲಿ ಹಮ್ಮಿಕೊಂಡಿರುವ 'ಸೇವಾ ಸಂಕಲ್ಪ ಅಭಿಯಾನ'ದ ಅಂಗವಾಗಿ ಆಯೋಜಿಸಿದ್ದ 'ಸೇವಾ ಜ್ಯೋತಿ ಯಾತ್ರೆ'ಯ ಬೈಕ್ ರ್ಯಾಲಿಯಲ್ಲಿ ಗಾಲಿ ಜನಾರ್ದನ ರೆಡ್ಡಿ ಅವರು ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರೊಂದಿಗೆ ಪಾಲ್ಗೊಂಡರು.



ಈ ಸಂದರ್ಭದಲ್ಲಿ ಮಾತನಾಡಿದ ಅವರು, ಸೇವಾ ಸಂಕಲ್ಪ ಅಭಿಯಾನದ ಮೂಲಕ ಜನಸೇವೆ ಹಾಗೂ ರಾಷ್ಟ್ರ ನಿರ್ಮಾಣದ ಸಂದೇಶವನ್ನು ಜನರಿಗೆ ತಲುಪಿಸುವ ಕಾರ್ಯ ನಡೆಯುತ್ತಿದೆ. ವಿಕಸಿತ ಭಾರತದ ನಿರ್ಮಾಣಕ್ಕೆ ಸಮಾಜದ ಎಲ್ಲ ವರ್ಗಗಳ ಸಹಭಾಗಿತ್ವ ಅಗತ್ಯವಾಗಿದೆ ಎಂದು ಹೇಳಿದರು.

ಬೈಕ್ ರ್ಯಾಲಿಯಲ್ಲಿ ಪಕ್ಷದ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸೇವಾ ಸಂಕಲ್ಪ ಅಭಿಯಾನದ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದರು.

ಕಾರ್ಯಕ್ರಮದಲ್ಲಿ ಬಿಜೆಪಿ ಮುಖ್ಯ ಸಚೇತಕ ದೊಡ್ಡನಗೌಡ ಎಚ್. ಪಾಟೀಲ್, ವಿಧಾನ ಪರಿಷತ್ ಸದಸ್ಯೆ ಹೇಮಲತಾ ನಾಯಕ್, ಜಿಲ್ಲಾ ಅಧ್ಯಕ್ಷ ನವೀನ ಗುಳಗಣ್ಣನವರ್, ಮಾಜಿ ಶಾಸಕ ಪರಣ್ಣ ಮುನವಳ್ಳಿ, ರಾಜ್ಯ ಕಾರ್ಯದರ್ಶಿ ಕೆ.ಎಸ್. ದಿವಾಕರ್, ರಾಜ್ಯ ಕಾರ್ಯಕಾರಿಣಿ ಸದಸ್ಯ ಬಸವರಾಜ್ ಕ್ಯಾವಟರ್, ಮಾಜಿ ಜಿಲ್ಲಾಧ್ಯಕ್ಷ ವಿರುಪಾಕ್ಷಪ್ಪ ಸಿಂಗನಾಳ್, ಜಿಲ್ಲಾ ಉಪಾಧ್ಯಕ್ಷ ಮನೋಹರ ಗೌಡ ಹೇರೂರು, ಮಾಜಿ ಕಾಡಾ ಅಧ್ಯಕ್ಷ ತಿಪ್ಪೇರುದ್ರಸ್ವಾಮಿ, ಗಿರೇಗೌಡ್ರು ಸೇರಿದಂತೆ ಪಕ್ಷದ ಪದಾಧಿಕಾರಿಗಳು, ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ದೇಶ ಸೇವೆಯೇ ಧ್ಯೇಯ, ಅಭಿವೃದ್ಧಿಯೇ ಸಂಕಲ್ಪ: ಬಳ್ಳಾರಿಯಲ್ಲಿ 'ಸೇವಾ ಜ್ಯೋತಿ ಯಾತ್ರೆ'

"ಮುಂಜಾನೆಯ ಮೆರಗು"

ಬಳ್ಳಾರಿ ಅ, 07– ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ 25 ವರ್ಷಗಳ ಸಾರ್ವಜನಿಕ ಸೇವೆಯನ್ನು ಸ್ಮರಿಸುವ ಹಿನ್ನೆಲೆಯಲ್ಲಿ ಬಳ್ಳಾರಿಯಲ್ಲಿ ಆಯೋಜಿಸಲಾಗಿದ್ದ 'ಸೇವಾ ಜ್ಯೋತಿ ಯಾತ್ರೆ' ಹಾಗೂ 'ವಿಕಸಿತ ಭಾರತ ಸಂಕಲ್ಪ ಸಭೆ'ಯಲ್ಲಿ ಮಾಜಿ ಸಚಿವ ಬಿ. ಶ್ರೀರಾಮುಲು ಭಾಗವಹಿಸಿ ಮಾತನಾಡಿದರು.

ಸಭೆಯನ್ನುದ್ದೇಶಿಸಿ ಮಾತನಾಡಿದ ಶ್ರೀರಾಮುಲು, ದೇಶ ಸೇವೆ, ಅಭಿವೃದ್ಧಿ ಹಾಗೂ ರಾಷ್ಟ್ರ ನಿರ್ಮಾಣದ ಆಶಯಗಳೊಂದಿಗೆ 'ಸೇವಾ ಸಂಕಲ್ಪ ಅಭಿಯಾನ'ವನ್ನು ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಸಾರ್ವಜನಿಕ ಸೇವೆಯ 25 ವರ್ಷಗಳ ಪಯಣವನ್ನು ಸ್ಮರಿಸುವ ಈ ಸಂದರ್ಭದಲ್ಲಿ ವಿಕಸಿತ ಭಾರತದ ನಿರ್ಮಾಣದ ಕುರಿತು ಚರ್ಚಿಸಲಾಯಿತು.

ಮೋದಿ ಅವರ ನಾಯಕತ್ವದಲ್ಲಿ ಭಾರತವು ಅಭಿವೃದ್ಧಿಯ ವಿವಿಧ ಕ್ಷೇತ್ರಗಳಲ್ಲಿ ಮುನ್ನಡೆಯುತ್ತಿದೆ ಎಂಬ ಅಭಿಪ್ರಾಯವನ್ನು ವ್ಯಕ್ತಪಡಿಸಿದ ಶ್ರೀರಾಮುಲು, ರಾಷ್ಟ್ರ ನಿರ್ಮಾಣದ ಕಾರ್ಯದಲ್ಲಿ ಪಕ್ಷದ ಕಾರ್ಯಕರ್ತರು ಹಾಗೂ ಯುವಜನತೆ ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಬಳ್ಳಾರಿಯಲ್ಲಿ ನಡೆದ 'ಸೇವಾ ಜ್ಯೋತಿ ಯಾತ್ರೆ'ಯಲ್ಲಿ ಪಕ್ಷದ ಮುಖಂಡರು, ಕಾರ್ಯಕರ್ತರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಯಾತ್ರೆಯ ಮೂಲಕ ಸೇವೆ, ಅಭಿವೃದ್ಧಿ ಹಾಗೂ ರಾಷ್ಟ್ರ ನಿರ್ಮಾಣದ ಕುರಿತು ಜನಜಾಗೃತಿ ಮೂಡಿಸಲಾಯಿತು.

ಕಾರ್ಯಕ್ರಮದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಅನಿಲ್ ಕುಮಾರ್ ನಾಯ್ಡು, ವಿಧಾನ ಪರಿಷತ್ ಸದಸ್ಯ ರಘು ಕೌಟಿಯ, ಮಾಜಿ ಸಂಸದ ಫಕೀರಪ್ಪ, ಮಾಜಿ ಶಾಸಕ ಸೋಮಶೇಖರ್ ರೆಡ್

ಸೇವಾ ಸಂಕಲ್ಪದೊಂದಿಗೆ ವಿಕಸಿತ ಭಾರತದತ್ತ ದಿಟ್ಟ ಹೆಜ್ಜೆ

ಗದಗದಲ್ಲಿ 'ಸೇವಾ ಜ್ಯೋತಿ ಯಾತ್ರೆ' ಹಾಗೂ 'ವಿಕಸಿತ ಭಾರತ ಸಂಕಲ್ಪ ಸಭೆ'

"ಮುಂಜಾನೆಯ ಮೆರಗು"

ಗದಗ ಅ, 07– ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಸರ್ಕಾರದ ಮುಖ್ಯಸ್ಥರಾಗಿ ಸತತ 25 ವರ್ಷಗಳ ಸಾರ್ವಜನಿಕ ಸೇವೆಯನ್ನು ಪೂರ್ಣಗೊಳಿಸಿರುವ ಹಿನ್ನೆಲೆಯಲ್ಲಿ ಬಿಜೆಪಿ ವತಿಯಿಂದ ದೇಶಾದ್ಯಂತ ಹಮ್ಮಿಕೊಂಡಿರುವ 'ಸೇವಾ ಸಂಕಲ್ಪ ಅಭಿಯಾನ'ದ ಅಂಗವಾಗಿ ಗದಗದಲ್ಲಿ 'ಸೇವಾ ಜ್ಯೋತಿ ಯಾತ್ರೆ' ಹಾಗೂ 'ವಿಕಸಿತ ಭಾರತ ಸಂಕಲ್ಪ ಸಭೆ' ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಪಾಲ್ಗೊಂಡು, ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರೊಂದಿಗೆ 'ಸೇವಾ ಜ್ಯೋತಿ' ಪ್ರಜ್ವಲಿಸುವ ಮೂಲಕ ಸೇವಾ ಸಂಕಲ್ಪ ಕೈಗೊಂಡರು. ಈ ಸಂದರ್ಭದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಸಂದೇಶ ಹಾಗೂ ಉದ್ಬೋಧಕ ಮಾತುಗಳನ್ನು ಆಲಿಸಲಾಯಿತು.

ಬಳಿಕ ಮಾತನಾಡಿದ ವಿಜಯೇಂದ್ರ, ಪ್ರಧಾನಿ ನರೇಂದ್ರ ಮೋದಿ ಅವರ 25 ವರ್ಷಗಳ ಸಾರ್ವಜನಿಕ ಸೇವೆಯ ಪಯಣವನ್ನು ಸ್ಮರಿಸಿ, ದೇಶದ ಅಭಿವೃದ್ಧಿ ಹಾಗೂ ಜನಕಲ್ಯಾಣದ ಕಾರ್ಯಗಳಲ್ಲಿ ಸೇವಾ ಮನೋಭಾವಕ್ಕೆ ಹೆಚ್ಚಿನ ಆದ್ಯತೆ



ನೀಡುವ ಅಗತ್ಯವಿದೆ ಎಂದು ಹೇಳಿದರು.

ಕೇಂದ್ರ ಸರ್ಕಾರದ ವಿವಿಧ ಜನಪರ ಹಾಗೂ ಕಲ್ಯಾಣ ಯೋಜನೆಗಳು ಸಮಾಜದ ಕಟ್ಟಕಡೆಯ ವ್ಯಕ್ತಿಗೂ ತಲುಪುವಂತೆ ಕಾರ್ಯಕರ್ತರು ಸೇತುವೆಯಾಗಿ ಕೆಲಸ ಮಾಡಬೇಕು. ಸರ್ಕಾರದ ಯೋಜನೆಗಳ ಕುರಿತು ಜನರಲ್ಲಿ ಅರಿವು ಮೂಡಿಸುವುದರ ಜೊತೆಗೆ, ಅರ್ಹ ಫಲಾನುಭವಿಗಳಿಗೆ ಯೋಜನೆಗಳ ಪ್ರಯೋಜನ ದೊರೆಯುವಂತೆ ಸಹಕರಿಸುವುದು ಸೇವಾ ಸಂಕಲ್ಪದ ಪ್ರಮುಖ ಉದ್ದೇಶವಾಗಿದೆ ಎಂದು ತಿಳಿಸಿದರು.

'ಸೇವಾ ಜ್ಯೋತಿ' ಮನೆ–ಮನ ತಲುಪಲಿ

'ಸೇವಾ ಜ್ಯೋತಿ' ಕೇವಲ ಒಂದು ಸಂಕೇತವಾಗಿರದೆ, ಜನಸೇವೆಯ ನಿರಂತರ ಚಟುವಟಿಕೆಗಳಿಗೆ ಪ್ರೇರಣೆಯಾಗಬೇಕು. ಪ್ರತಿಯೊಬ್ಬ ಕಾರ್ಯಕರ್ತರೂ ಈ ಜ್ಯೋತಿಯ ಸಂದೇಶವನ್ನು ಮನೆ–ಮನೆಗೆ ಕೊಂಡೊಯ್ದು, ಸಮಾಜದ ವಿವಿಧ ವರ್ಗಗಳ ಜನರ ಸಮಸ್ಯೆಗಳಿಗೆ ಸ್ಪಂದಿಸುವ ಕೆಲಸ ಮಾಡಬೇಕು ಎಂದು ವಿಜಯೇಂದ್ರ ಕರೆ ನೀಡಿದರು.

ಬಲಿಷ್ಠ, ಸ್ವಾವಲಂಬಿ ಹಾಗೂ ವಿಕಸಿತ ಭಾರತ ನಿರ್ಮಾಣಕ್ಕೆ ಪ್ರತಿಯೊಬ್ಬ ನಾಗರಿಕನ ಸಹಭಾಗಿತ್ವ ಅಗತ್ಯವಾಗಿದೆ. 2047ರ ವೇಳೆಗೆ ವಿಕಸಿತ ಭಾರತದ ಗುರಿ ಸಾಧಿಸುವ ನಿಟ್ಟಿನಲ್ಲಿ ಜನರು ಹಾಗೂ ಸಂಘಟನೆಗಳು ತಮ್ಮದೇ ಆದ ಜವಾಬ್ದಾರಿಯನ್ನು ನಿರ್ವಹಿಸಬೇಕಿದೆ. ಈ ನಿಟ್ಟಿನಲ್ಲಿ ಕಾರ್ಯಕರ್ತರು ಸಂಘಟನಾತ್ಮಕವಾಗಿ ಹಾಗೂ ಸಾಮಾಜಿಕವಾಗಿ ಸಕ್ರಿಯರಾಗಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ 'ವಿಕಸಿತ ಭಾರತ @2047' ನಿರ್ಮಾಣಕ್ಕಾಗಿ ಸಾಮೂಹಿಕ ಪ್ರತಿಜ್ಞಾ ವಿಧಿ ಸ್ವೀಕರಿಸಲಾಯಿತು. ದೇಶದ ಅಭಿವೃದ್ಧಿ, ಸಾಮಾಜಿಕ ಸಬಲೀಕರಣ, ಸ್ವಚ್ಛತೆ, ಆತ್ಮನಿರ್ಭರತೆ ಹಾಗೂ ಜನಸೇವೆಯಂತಹ ಆಶಯಗಳನ್ನು ಮುಂದಿಟ್ಟುಕೊಂಡು ಕಾರ್ಯನಿರ್ವಹಿಸುವ ಸಂಕಲ್ಪವನ್ನು ಮುಖಂಡರು ಹಾಗೂ ಕಾರ್ಯಕರ್ತರು ವ್ಯಕ್ತಪಡಿಸಿದರು.

ಸೇವಾ ಕಾರ್ಯಗಳಿಗೆ ಒತ್ತು

ಅಭಿಯಾನದ ಅಂಗವಾಗಿ ವಿವಿಧ ಸಮಾಜಮುಖಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಜನರೊಂದಿಗೆ ನೇರ ಸಂಪರ್ಕ ಸಾಧಿಸಲು ಬಿಜೆಪಿ ಮುಂದಾಗಿದೆ. ಸೇವಾ ಚಟುವಟಿಕೆಗಳ ಮೂಲಕ ಸಾರ್ವಜನಿಕ ಸಮಸ್ಯೆಗಳನ್ನು ಆಲಿಸುವುದು, ಅಗತ್ಯವಿರುವವರಿಗೆ



ನೆರವು ನೀಡುವುದು ಹಾಗೂ ಕೇಂದ್ರ ಸರ್ಕಾರದ ಯೋಜನೆಗಳ ಕುರಿತು ಮಾಹಿತಿ ಒದಗಿಸುವ ಕಾರ್ಯಗಳಿಗೆ ಒತ್ತು ನೀಡಲಾಗುತ್ತಿದೆ.

ಕಾರ್ಯಕರ್ತರು ಪಕ್ಷದ ಸಂಘಟನಾ ಚಟುವಟಿಕೆಗಳ ಜತೆಗೆ ಸಾಮಾಜಿಕ ಜವಾಬ್ದಾರಿಯನ್ನೂ ನಿರ್ವಹಿಸಬೇಕು. ಸಮಾಜದ ಎಲ್ಲ ವರ್ಗಗಳನ್ನು ಒಳಗೊಂಡ ಅಭಿವೃದ್ಧಿ ಹಾಗೂ ಜನಸೇವೆಯ ಆಶಯದೊಂದಿಗೆ ಒಗ್ಗಟ್ಟಾಗಿ ಕೆಲಸ ಮಾಡುವ ಅಗತ್ಯವಿದೆ ಎಂದು ವಿಜಯೇಂದ್ರ ಹೇಳಿದರು.

ಕಾರ್ಯಕ್ರಮದಲ್ಲಿ ಮಾಜಿ ಸಚಿವ ಹಾಗೂ ಶಾಸಕ ಸಿ.ಸಿ. ಪಾಟೀಲ್, ಬಿಜೆಪಿ ಜಿಲ್ಲಾಧ್ಯಕ್ಷ ತೋಟಪ್ಪ ಕುರಡಗಿ, ರಾಜ್ಯ ಪ್ರಧಾನ ಕಾರ್ಯದರ್ಶಿ ಪ್ರೀತಂಗೌಡ, ಶಾಸಕ ಚಂದು ಲಮಾಣಿ, ಮುಖಂಡ ಅನಿಲ್ ಮೆಣಸಿನಕಾಯಿ, ವಿಭಾಗ ಸಹಪ್ರಭಾರಿ ಬೋಜರಾಜ್ ಕ–ರೋದಿ, ಮಹಿಳಾ ಮೋರ್ಚಾದ ನಿರ್ಮಲಾ, ಮಾಜಿ ಜಿಲ್ಲಾಧ್ಯಕ್ಷ ಕರೀಗೌಡ, ಪ್ರಕೋಷ್ಠಗಳ ಸಂಚಾಲಕ ಶ್ರೀಪತಿ ಉಡುಪಿ ಸೇರಿದಂತೆ ಪಕ್ಷದ ವಿವಿಧ ಘಟಕಗಳ ಪ್ರಮುಖರು, ಪದಾಧಿಕಾರಿಗಳು ಹಾಗೂ ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕರ್ತರು ಭಾಗವಹಿಸಿದ್ದರು

ಮೇವು ಬೀಜಕಿರುಪೊಟ್ಟಣ ವಿತರಣೆ

ಸದುಪಯೋಗಿಸಿಕೊಳ್ಳಿ: ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ



"ಮುಂಜಾನೆಯ ಮೆರಗು"

ದಾವಣಗೆರೆ, ಅ, 07– ಜಿಲ್ಲೆಯ ಪ್ರತಿ ಪಶುವೈದ್ಯಕೀಯ ಸಂಸ್ಥೆಯಲ್ಲಿ ಉಚಿತ ಮೇವಿನ ಬೀಜದ ಕಿರುಪೊಟ್ಟಣಗಳು ಲಭ್ಯವಿದ್ದು, ಜಾನುವಾರುಗಳನ್ನು ಹೊಂದಿರುವ ಅರ್ಹ ರೈತರು ನಿಗದಿತ ದಾಖಲೆಗಳನ್ನು ಸಲ್ಲಿಸಿ ಈ ಸೌಲಭ್ಯವನ್ನು ಸದುಪಯೋಗ ಪಡೆದುಕೊಳ್ಳುವಂತೆ ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ.ಎಂ ಅವರು ತಿಳಿಸಿದರು.

ಅವರು ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪಶುಪಾಲನೆ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಹಮ್ಮಿಕೊಂಡಿದ್ದ ಮೇವು ಬೀಜ ಕಿರುಪೊಟ್ಟಣಗಳನ್ನು ರೈತರಿಗೆ ವಿತರಿಸಿ ಮಾತನಾಡಿದರು.

ಜಿಲ್ಲೆಯಲ್ಲಿ ವಾಡಿಕೆಗಿಂತಕಡಿಮೆ ಮಳೆಯಾಗಿರುವುದರಿಂದ ಸೃಷ್ಟಿಯಾಗಿರುವ ಬರ ಪರಿಸ್ಥಿತಿಯಲ್ಲಿ ಜಾನುವಾರುಗಳಿಗೆ ಮೇವಿನ ಅಭಾವ ಉಂಟಾಗದಂತೆ ತಡೆಯಲು ಕ್ರಮ ಕೈಗೊಳ್ಳಲಾಗಿದೆ. ಈಗಾಗಲೇ ಜಿಲ್ಲೆಗೆ ಪೂರೈಕೆಯಾಗಿರುವ ಸೊರಗಮ್ ಮೇವಿನ ಜೋಳ ಹಾಗೂ ಆಫ್ರಿಕನ್‌ಟಾಲ್ ತಳಿಯ ಮೇವಿನ ಬೀಜದ ಕಿರುಪೊಟ್ಟಣಗಳನ್ನು ಜಿಲ್ಲೆಯಎಲ್ಲಾ ತಾಲೂಕುಗಳಿಗೆ ಸರಬರಾಜು ಮಾಡಲಾಗಿದೆಎಂದು ತಿಳಿಸಿದರು.

ಜಾನುವಾರುಗಳನ್ನು ಹೊಂದಿರುವ ರೈತರು ತಮ್ಮ ಜಮೀನಿನಲ್ಲಿ ಮೇವನ್ನು ಉತ್ಪಾದಿಸಲು ಸಿದ್ಧರಿರಬೇಕು. ಉಚಿತ ಮೇವಿನ ಬೀಜದ ಕಿರುಪೊಟ್ಟಣಗಳನ್ನು ಪಡೆದು, ಅದನ್ನುತಮ್ಮ ಸ್ವಂತಜಮೀನಿನಲ್ಲೇ ಬೆಳೆದು ಜಾನುವಾರುಗಳಿಗೆ ಉಚಿತವಾಗಿ ಉಪಯೋಗಿಸಿಕೊಳ್ಳಬೇಕು ಎಂದು ತಿಳಿಸಿದರು.

ಪ್ರಸಕ್ತ ಸಾಲಿನಲ್ಲಿಜಿಲ್ಲೆಗೆಒಟ್ಟು 11,751 ಮೇವಿನ ಬೀಜದ ಕಿರುಪೊಟ್ಟಣಗಳು ಸರಬರಾಜಾಗಿದ್ದು, ಎಲ್ಲಾ ತಾಲೂಕುಗಳಲ್ಲಿ ವಿತರಿಸಲಾಗುತ್ತಿದೆ. ಆದ್ದರಿಂದ ಜಾನುವಾರುಗಳನ್ನು ಹೊಂದಿರುವ ಆಸಕ್ತ ರೈತರು ಅಗತ್ಯ ದಾಖಲೆಗಳೊಂದಿಗೆ ತಮ್ಮ ಸಮೀಪದ ಪಶುವೈದ್ಯಕೀಯ ಸಂಸ್ಥೆಯನ್ನು ಸಂಪರ್ಕಿಸಿ ಉಚಿತವಾಗಿ ಮೇವಿನ ಬೀಜದ ಕಿರುಪೊಟ್ಟಣಗಳನ್ನು ಪಡೆದುಕೊಳ್ಳುವಂತೆ ತಿಳಿಸಿದರು.

ಪಶುಪಾಲನೆ ಮತ್ತು ಪಶುವೈದ್ಯಕೀಯ ಇಲಾಖೆಯ ಉಪ ನಿರ್ದೇಶಕರಾದ ಡಾ.ಮಹೇಶ್, ಜಿಲ್ಲಾ ಪಂಚಾಯಿತಿಯ ಯೋಜನಾ ನಿರ್ದೇಶಕಿ ರೇಷ್ಮಾಕೌಸರ್ ಜಿಲ್ಲಾ ಮಟ್ಟದ ಅಧಿಕಾರಿಗಳು ರೈತರು ಹಾಗೂ ಇತರರು ಉಪಸ್ಥಿತರಿದ್ದರು.

ಜಯನಗರದಲ್ಲಿ 'ಗುರುಭವನ' ಲೋಕಾರ್ಪಣೆ

ಧಾರ್ಮಿಕ–ಸಾಂಸ್ಕೃತಿಕ ಚಟುವಟಿಕೆಗಳಿಗೆ ಹೊಸ ವೇದಿಕೆ

"ಮುಂಜಾನೆಯ ಮೆರಗು"

ಬೆಂಗಳೂರು ಅ, 07– ನಗರದ ಜಯನಗರದ ಶ್ರೀ ಶಿವಬಸವ ಸ್ವಾಮೀಜಿ ಕಲ್ಯಾಣ ಕೇಂದ್ರದ ಆವರಣದಲ್ಲಿ ನೂತನವಾಗಿ ನಿರ್ಮಿಸಲಾಗಿರುವ 'ಗುರುಭವನ'ದ ಉದ್ಘಾಟನಾ ಸಮಾರಂಭವು ಶ್ರದ್ಧಾ–ಭಕ್ತಿಭಾವದಿಂದ ನೆರವೇರಿತು. ಸಮಾರಂಭದಲ್ಲಿ ಮಾಜಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಭಾಗವಹಿಸಿ, ಗುರುಭವನದ ಸಮಾಜಮುಖಿ ಕಾರ್ಯಗಳಿಗೆ ಶುಭ ಹಾರೈಸಿದರು.

ಡಂಬಳ–ಗದಗದ ಎಡೆಯೂರು ಸಂಸ್ಥಾನಮಠದ ಶ್ರೀಮನ್ನಿರಂಜನ ಪ್ರಣವಸ್ವರೂಪಿ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳ ದಿವ್ಯ ಸಾನ್ನಿಧ್ಯದಲ್ಲಿ ಹಾಗೂ ಅವರಿಂದ



ಗುರುಭವನದ ಉದ್ಘಾಟನೆ ನೆರವೇರಿತು. ನಾಗನೂರು ಶ್ರೀ ರುದ್ರಾಕ್ಷಿಮಠದ ಪೂಜ್ಯಶ್ರೀ ಡಾ. ಅಲ್ಲಮಪ್ರಭು ಮಹಾಸ್ವಾಮಿಗಳ ನೇತೃತ್ವದಲ್ಲಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಜರುಗಿದವು.

ಸಮಾರಂಭದಲ್ಲಿ ಮಾತನಾಡಿದ ಲಕ್ಷ್ಮೀ ಹೆಬ್ಬಾಳ್ಕರ್, ಧಾರ್ಮಿಕ ಹಾಗೂ ಸಾಂಸ್ಕೃತಿಕ ಪರಂಪರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವ ಕಾರ್ಯದಲ್ಲಿ ಮಠಗಳು, ಧಾರ್ಮಿಕ ಕೇಂದ್ರಗಳು ಮತ್ತು ಗುರುಭವನಗಳ ಪಾತ್ರ ಮಹತ್ವದ್ದಾಗಿದೆ. ಸಮಾಜದ ಒಳಿತಿಗಾಗಿ, ಸಂಸ್ಕೃತಿ ಮತ್ತು ಸಂಸ್ಕಾರಗಳ ಪ್ರಸಾರಕ್ಕಾಗಿ ಶ್ರಮಿಸುತ್ತಿರುವ ಈ ಗುರುಭವನವು ಭಕ್ತಾಧಿಗಳು ಹಾಗೂ ಸಾರ್ವಜನಿಕರಿಗೆ ನಿರಂತರವಾಗಿ ನೆರವಾಗುವ ಕೇಂದ್ರವಾಗಿ ಬೆಳೆಯಲಿ ಎಂದು ಆಶಿಸಿದರು.

ಸಮಾಜದಲ್ಲಿ ಮಾನವೀಯ ಮೌಲ್ಯಗಳು, ಸೇವಾ ಮನೋಭಾವ, ಪರಸ್ಪರ ಸಹಕಾರ ಮತ್ತು ಸೌಹಾರ್ದತೆಯನ್ನು ಬೆಳೆಸುವ ನಿಟ್ಟಿನಲ್ಲಿ ಇಂತಹ ಕೇಂದ್ರಗಳು ಪರಿಣಾಮಕಾರಿ ವೇದಿಕೆಗಳಾಗುತ್ತವೆ. ಧಾರ್ಮಿಕ ಕಾರ್ಯಕ್ರಮಗಳ ಜತೆಗೆ ಸಾಮಾಜಿಕ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳಿಗೂ ಗುರುಭವನ ಅವಕಾಶ ಕಲ್ಪಿಸುವಂತಾಗಲಿ ಎಂದು ಅವರು ಆಶಿಸಿದರು.

ಗುರುಭವನ ನಿರ್ಮಾಣದಿಂದ ಕಲ್ಯಾಣ ಕೇಂದ್ರದ ಚಟುವಟಿಕೆಗಳಿಗೆ ಮತ್ತಷ್ಟು ವಿಸ್ತಾರ ದೊರೆಯಲಿದ್ದು, ಧಾರ್ಮಿಕ ಪ್ರವಚನಗಳು, ಆಧ್ಯಾತ್ಮಿಕ ಕಾರ್ಯಕ್ರಮಗಳು, ಸಾಂಸ್ಕೃತಿಕ ಚಟುವಟಿಕೆಗಳು ಹಾಗೂ ಸಮಾಜಮುಖಿ ಕಾರ್ಯಕ್ರಮಗಳನ್ನು ಆಯೋಜಿಸಲು ಅನುಕೂಲವಾಗಲಿದೆ ಎಂಬ ಅಭಿಪ್ರಾಯ ಸಮಾರಂಭದಲ್ಲಿ ವ್ಯಕ್ತವಾಯಿತು.

ಕಾರ್ಯಕ್ರಮದ ಅಂಗವಾಗಿ ಮಠಾಧೀಶರ ಆಶೀರ್ವಚನ, ಧಾರ್ಮಿಕ ವಿಧಿ–ವಿಧಾನಗಳು ಹಾಗೂ ಭಕ್ತರ ಸಮಾಗಮ ನಡೆಯಿತು. ನೂತನ ಗುರುಭವನದ ಉದ್ಘಾಟನೆ ಹಿನ್ನೆಲೆಯಲ್ಲಿ ಕಲ್ಯಾಣ ಕೇಂದ್ರದಲ್ಲಿ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು.

ಸಮಾರಂಭದಲ್ಲಿ ಶಾಸಕರಾದ ಮಹಾಂತೇಶ ಕೌಜಲಗಿ, ಬಾಬಾಸಾಹೇಬ ಪಾಟೀಲ, ಪ್ರಮುಖರಾದ ಮಹಾಂತೇಶ ಬಿರಾದಾರ, ಕಲ್ಯಾಣ ಕೇಂದ್ರದ ಕಾರ್ಯದರ್ಶಿ ಶಂಭು ಹಿರೇಮಠ ಸೇರಿದಂತೆ ಹಲವು ಗಣ್ಯರು, ಧಾರ್ಮಿಕ ಮುಖಂಡರು, ಗಣ್ಯರು ಹಾಗೂ ಅಪಾರ ಸಂಖ್ಯೆಯ ಭಕ್ತಾಧಿಗಳು ಉಪಸ್ಥಿತರಿದ್ದರು.

ಮೂಲ ಯೋಜನಾ ವೆಚ್ಚಕ್ಕಿಂತ ಹಲವು ಪಟ್ಟು ಟೋಲ್ ಸಂಗ್ರಹ: ರಾಜ್ಯ ಸರ್ಕಾರದ ವಿರುದ್ಧ ಆಕ್ರೋಶ

"ಮುಂಜಾನೆಯ ಮೆರಗು"

ಬೆಂಗಳೂರು: ಬೆಂಗಳೂರು–ವೈಟ್‌ಫೀಲ್ಡ್ ಮೂಲಸೌಕರ್ಯ ಕಾರಿಡಾರ್ (ನೈಸ್) ಯೋಜನೆಯಡಿ ರಸ್ತೆ ಕಾಮಗಾರಿ ಪೂರ್ಣಗೊಳ್ಳದಿದ್ದರೂ ಟೋಲ್ ವಸೂಲಿ ಮಾಡಲಾಗುತ್ತಿದೆ ಎಂದು ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಆರೋಪಿಸಿದ್ದು, ತಕ್ಷಣವೇ ಟೋಲ್ ಸುಂಕ ಸಂಗ್ರಹವನ್ನು ಸ್ಥಗಿತಗೊಳಿಸುವಂತೆ ರಾಜ್ಯ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಬೆಂಗಳೂರಿನಲ್ಲಿ ನಡೆದ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, ನೈಸ್ ಯೋಜನೆ ಹೆಸರಿನಲ್ಲಿ ನಡೆಯುತ್ತಿರುವ ಟೋಲ್ ವಸೂಲಿ ಕುರಿತು ವಿಸ್ತೃತವಾಗಿ ಮಾತನಾಡಿದರು. ರಸ್ತೆ ಕಾಮಗಾರಿ ಅಪೂರ್ಣವಾಗಿರುವ ಸಂದರ್ಭದಲ್ಲಿ ಸಾರ್ವಜನಿಕರಿಂದ ಟೋಲ್ ಸಂಗ್ರಹಿಸುವುದು ಸರಿಯಲ್ಲ ಎಂದು ಅವರು ಆಕ್ಷೇಪ ವ್ಯಕ್ತಪಡಿಸಿದರು.

ಟೋಲ್ ವಸೂಲಿ ವಿಚಾರದಲ್ಲಿ ಗೌರವಾನ್ವಿತ ಹೈಕೋರ್ಟ್ ಕಟುವಾದ ಅಭಿಪ್ರಾಯ ದಾಖಲಿಸಿದ್ದರೂ, ಸುಪ್ರೀಂ ಕೋರ್ಟ್‌ನಿಂದ ತಡೆಯಾಜ್ಞೆ ಇಲ್ಲದಿರುವ ಹಿನ್ನೆಲೆಯಲ್ಲಿ ಟೋಲ್ ವಸೂಲಿ ಮುಂದುವರಿಸಿರುವುದು ಪ್ರಶ್ನಾರ್ಹವಾಗಿದೆ ಎಂದು ಕುಮಾರಸ್ವಾಮಿ ಹೇಳಿದರು.

ನೈಸ್ ರಸ್ತೆಯ ಮೂಲ ಯೋಜನಾ ವೆಚ್ಚ 1,583.76 ಕೋಟಿಯಷ್ಟಿದ್ದರೆ, ಈವರೆಗೆ 4,756.48 ಕೋಟಿ ಟೋಲ್ ಮೊತ್ತವನ್ನು ವಸೂಲಿ ಮಾಡಲಾಗಿದೆ ಎಂದು ಅವರು



ತಿಳಿಸಿದರು. ಮೂಲ ಯೋಜನಾ ವೆಚ್ಚಕ್ಕಿಂತ ಹಲವು ಪಟ್ಟು ಹೆಚ್ಚಿನ ಮೊತ್ತವನ್ನು ಟೋಲ್ ಮೂಲಕ ಸಂಗ್ರಹಿಸಲಾಗಿದೆ ಎಂದು ಆರೋಪಿಸಿದ ಅವರು, ಸಾರ್ವಜನಿಕರ ಮೇಲೆ ಮುಂದುವರಿದಿರುವ ಈ ಆರ್ಥಿಕ ಹೊರೆಯನ್ನು ತಕ್ಷಣವೇ ನಿಲ್ಲಿಸಬೇಕಾಗಿದೆ ಎಂದರು.

ನೈಸ್ ಯೋಜನೆಯ ಟೋಲ್ ವಸೂಲಿ ಕುರಿತು ರಾಜ್ಯ ಸರ್ಕಾರ ತುರ್ತು ಕ್ರಮ ಕೈಗೊಂಡು, ಸಾರ್ವಜನಿಕರ ಹಿತ ಕಾಪಾಡಬೇಕು. ರಸ್ತೆ ಕಾಮಗಾರಿ ಹಾಗೂ ಯೋಜನೆಯ ಪ್ರಸ್ತುತ ಸ್ಥಿತಿಯನ್ನು ಸಮಗ್ರವಾಗಿ ಪರಿಶೀಲಿಸಿ, ನಿಯಮಾನುಸಾರ ಸೂಕ್ತ ನಿರ್ಧಾರ ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದರು.

ಸಾರ್ವಜನಿಕರು ಕೂಡ ಯಾವುದೇ ಕಾರಣಕ್ಕೂ ಟೋಲ್ ಪಾವತಿಸಬಾರದು ಎಂದು ಕುಮಾರಸ್ವಾಮಿ ಕರೆ ನೀಡಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕ ಸುರೇಶ್ ಗೌಡ, ಚೌಡರೆಡ್ಡಿ ತೂಪಲ್ಲಿ, ಗ್ರೇಟರ್ ಬೆಂಗಳೂರು ಜೆಡಿಎಸ್ ಅಧ್ಯಕ್ಷ ಎಚ್.ಎಂ.ರಮೇಶ್ ಗೌಡ, ರಾಜ್ಯ ವಕ್ತಾರ ಎಚ್.ಎನ್.ದೇವರಾಜು ಸೇರಿದಂತೆ ಜೆಡಿಎಸ್ ಮುಖಂಡರು ಉಪಸ್ಥಿತರಿದ್ದರು.

ಯಿಯಿಮಳೆಕೊರತೆಯಿಂದಬೆಳೆಹಾನಿ:ಬಿ.ಬೆಳಗಲ್‌ನಲ್ಲಿ ಪರಮೇಶ್ವರ್‌ರಿಂದ ಜಮೀನು ಪರಿಶೀಲನೆ

"ಮುಂಜಾನೆಯ ಮೆರಗು"

ಬಳ್ಳಾರಿ ಅ, 07– ಮಳೆ ಕೊರತೆಯಿಂದ ಕೃಷಿ ಬೆಳೆಗಳು ಹಾನಿಗೀಡಾಗಿರುವ ಹಿನ್ನೆಲೆಯಲ್ಲಿ ಉಪ ಮುಖ್ಯಮಂತ್ರಿ ಪರಮೇಶ್ವರ್ ಅವರು ಬಳ್ಳಾರಿ ತಾಲೂಕಿನ ಬಿ.ಬೆಳಗಲ್ ಗ್ರಾಮಕ್ಕೆ ಭೇಟಿ ನೀಡಿ ತೊಗರಿ ಹಾಗೂ ಸಜ್ಜೆ ಬೆಳೆಗಳ ಜಮೀನುಗಳನ್ನು ಪರಿಶೀಲಿಸಿದರು. ಈ ವೇಳೆ ರೈತರೊಂದಿಗೆ ನೇರವಾಗಿ ಸಂವಾದ ನಡೆಸಿ, ಬೆಳೆ ಹಾನಿ ಹಾಗೂ ಬರ ಪರಿಸ್ಥಿತಿಯಿಂದ ಎದುರಾಗಿರುವ ಸಮಸ್ಯೆಗಳ ಕುರಿತು ಮಾಹಿತಿ ಪಡೆದುಕೊಂಡರು.

ಗ್ರಾಮದ ಜಮೀನುಗಳಿಗೆ ತೆರಳಿ ಪರಿಶೀಲನೆ ನಡೆಸಿದ ಸಂದರ್ಭದಲ್ಲಿ ಮಳೆಯ ಅಭಾವದಿಂದ ತೊಗರಿ ಬೆಳೆ ನಿರೀಕ್ಷಿತ ಪ್ರಮಾಣದಲ್ಲಿ ಬೆಳವಣಿಗೆಯಾಗದೆ ಕುಂಠಿತಗೊಂಡಿರುವುದು ಕಂಡುಬಂದಿತು. ಇದೇ ವೇಳೆ ಸಜ್ಜೆ ಬೆಳೆ ಮಳೆಯ ಕೊರತೆಯಿಂದ ಸಂಪೂರ್ಣವಾಗಿ ಒಣಗಿರುವ ಸ್ಥಿತಿಯಲ್ಲಿರುವುದನ್ನು ಗಮನಿಸಿದರು. ಮಳೆ ಕೈಕೊಟ್ಟಿರುವ ಪರಿಣಾಮ ಬೆಳೆಗಳ ಇಳುವರಿ ಕುಸಿಯುವ ಆತಂಕ ರೈತರಲ್ಲಿ ಎದುರಾಗಿದೆ.

ರೈತರಾದ ಮಲ್ಲಿಕಾರ್ಜುನಗೌಡ ಹಾಗೂ ತಿಪ್ಪೇರುದ್ರಪ್ಪ ಅವರೊಂದಿಗೆ ಮಾತುಕತೆ ನಡೆಸಿದ ಪರಮೇಶ್ವರ್ ಅವರು, ಜಮೀನಿನಲ್ಲಿ ಬಿತ್ತನೆ ಮಾಡಿದ ಬೆಳೆ, ಮಳೆಯ ಪ್ರಮಾಣ, ಬೆಳೆ ಬೆಳವಣಿಗೆ, ಹಾನಿಯ ಸ್ವರೂಪ ಹಾಗೂ ರೈತರು ಎದುರಿಸುತ್ತಿರುವ ಆರ್ಥಿಕ ಸಮಸ್ಯೆಗಳ ಕುರಿತು ಮಾಹಿತಿ ಪಡೆದುಕೊಂಡರು. ರೈತರು ತಮ್ಮ ಜಮೀನುಗಳಲ್ಲಿನ ವಾಸ್ತವ ಪರಿಸ್ಥಿತಿಯನ್ನು ವಿವರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಪರಮೇಶ್ವರ್, ಮಳೆ ಕೊರತೆಯಿಂದ ರೈತರು ಎದುರಿಸುತ್ತಿರುವ ಸಂಕಷ್ಟವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದ್ದು, ಬೆಳೆ ಹಾನಿಯ ವಾಸ್ತವ ಸ್ಥಿತಿಯನ್ನು ಪರಿಶೀಲಿಸಲಾಗುತ್ತಿದೆ ಎಂದರು. ಬೆಳೆ ಹಾನಿಯ ಸಮಗ್ರ ಮೌಲ್ಯಮಾಪನದ ಆಧಾರದ ಮೇಲ

ಮಾತೃ ವಂದನಾ ಯೋಜನೆ: ಅಂಗನವಾಡಿ ಕಾರ್ಯಕರ್ತರಿಗೆ ತರಬೇತಿ

ಮಾತೃ ವಂದನಾ ಯೋಜನೆಯ ಸೌಲಭ್ಯ ಅರ್ಹ ತಾಯಂದಿರಿಗೆ ತಲುಪಿಸಲು ಕಾರ್ಯಕರ್ತರಿಗೆ ತರಬೇತಿ

“ಮುಂಜಾನೆಯ ಮೆರಗು”

ಜಗಳೂರು ಅ, 07– ತಾಲೂಕಿನ ಕಲ್ಲೇದೇವರಪುರ ವಲಯದ ಅಂಗನವಾಡಿ ಕಾರ್ಯಕರ್ತರಿಗೆ ಪ್ರಧಾನಮಂತ್ರಿ ಮಾತೃ ವಂದನಾ ಯೋಜನೆ (ಕಒಒಗಿಜ) ಕುರಿತು ವಿಶೇಷ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಗರ್ಭಿಣಿಯರು ಹಾಗೂ ಬಾಣಂತಿಯರ ಆರೋಗ್ಯ ಮತ್ತು ಪೌಷ್ಟಿಕತೆ ಸುಧಾರಿಸುವ ಉದ್ದೇಶದಿಂದ ಕೇಂದ್ರ ಸರ್ಕಾರ ಜಾರಿಗೊಳಿಸಿರುವ ಮಾತೃ ವಂದನಾ ಯೋಜನೆಯಡಿ ಅರ್ಹ ಫಲಾನುಭವಿಗಳಿಗೆ ಆರ್ಥಿಕ ನೆರವು ನೀಡಲಾಗುತ್ತಿದೆ. ಯೋಜನೆಯ ಸೌಲಭ್ಯವನ್ನು ಅರ್ಹ ಮಹಿಳೆಯರಿಗೆ ತಲುಪಿಸುವಲ್ಲಿ ಅಂಗನವಾಡಿ ಕಾರ್ಯಕರ್ತರು ಪ್ರಮುಖ ಪಾತ್ರ ವಹಿಸುತ್ತಿರುವ ಹಿನ್ನೆಲೆಯಲ್ಲಿ ಅವರಿಗೆ ಯೋಜನೆಯ ನಿಯಮಗಳು ಹಾಗೂ ಆನ್‌ಲೈನ್ ಅರ್ಜಿ ಪ್ರಕ್ರಿಯೆ ಕುರಿತು ತರಬೇತಿ ನೀಡಲಾಯಿತು.



ಯೋಜನೆಯಡಿ ಮೊದಲನೇ ಮಗುವಿನ ಗರ್ಭಧಾರಣೆಗೆ ಎರಡು ಕಂತುಗಳಲ್ಲಿ ಒಟ್ಟು 5,000 ಪ್ರೋತ್ಸಾಹಧನ ನೀಡಲಾಗುತ್ತದೆ. ಅದೇ ರೀತಿ ಎರಡನೇ ಮಗುವು ಹೆಣ್ಣು ಮಗುವಾಗಿದ್ದರೆ 6,000 ಪ್ರೋತ್ಸಾಹಧನ ನೀಡುವ ವ್ಯವಸ್ಥೆಯಿದೆ. ಈ ಮೂಲಕ ಗರ್ಭಿಣಿಯರು ಹಾಗೂ ಬಾಣಂತಿಯರಿಗೆ ಆರ್ಥಿಕ ಸಹಾಯ ಒದಗಿಸುವುದರ ಜತೆಗೆ ತಾಯಿ ಮತ್ತು ಮಗುವಿನ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಲು ಉತ್ತೇಜನ ನೀಡಲಾಗುತ್ತಿದೆ.

ಮೊಬೈಲ್‌ನಲ್ಲೇ ಅರ್ಜಿ ನೋಂದಣಿ

ಮಾತೃ ವಂದನಾ ಯೋಜನೆಯಡಿ ಅರ್ಜಿ ಸಲ್ಲಿಸುವ ಪ್ರಕ್ರಿಯೆಯನ್ನು ಸರಳಗೊಳಿಸಲಾಗಿದ್ದು, ಅಂಗನವಾಡಿ ಕಾರ್ಯಕರ್ತರು ತಮ್ಮ ಮೊಬೈಲ್ ಮೂಲಕವೇ ಕಒಒಗಿಜ ವೆಬ್‌ಸೈಟ್‌ನಲ್ಲಿ ಅರ್ಹ ಗರ್ಭಿಣಿಯರು ಹಾಗೂ ಬಾಣಂತಿಯರ ಮಾಹಿತಿಯನ್ನು ದಾಖಲಿಸಬಹುದಾಗಿದೆ.

ಫಲಾನುಭವಿಗಳ ಅಗತ್ಯ ಮಾಹಿತಿಯನ್ನು ಸರಿಯಾಗಿ ನಮೂದಿಸುವುದು, ದಾಖಲೆಗಳನ್ನು ಪರಿಶೀಲಿಸುವುದು, ಅರ್ಜಿ ಸಲ್ಲಿಸುವುದು ಹಾಗೂ ಅರ್ಜಿಯ ಪ್ರಗತಿಯನ್ನು ಗಮನಿಸುವುದು ಸೇರಿದಂತೆ ಆನ್‌ಲೈನ್ ಪ್ರಕ್ರಿಯೆಯ ವಿವಿಧ ಹಂತಗಳ ಕುರಿತು ಕಾರ್ಯಕರ್ತರಿಗೆ ಪ್ರಾಯೋಗಿಕ ಮಾಹಿತಿ ನೀಡಲಾಯಿತು.

ಈ ಸಂದರ್ಭದಲ್ಲಿ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಶಿವಕುಮಾರ್ ಬಿ.ಎಸ್., ವೃತ್ತ ಮೇಲ್ವಿಚಾರಕಿ ಟಿ. ಶಾಂತಮ್ಮ, ಪೋಷಣ್ ಅಭಿಯಾನ ಹಾಗೂ ಮಾತೃ ವಂದನಾ ಯೋಜನೆಯ ತಾಲೂಕು ಸಂಯೋಜಕ ಈಶ್ವರ ಎಂ.ಎನ್. ಸೇರಿದಂತೆ ಕಲ್ಲೇದೇವರಪುರ ವಲಯದ ಅಂಗನವಾಡಿ ಕಾರ್ಯಕರ್ತರು ಉಪಸ್ಥಿತರಿದ್ದರು.

ನಿವೃತ್ತ ಕಾಲೇಜು ಅಧೀಕ್ಷಕ ಬಿ.ಎಸ್. ಹನುಮಂತಪ್ಪ ನಿಧನ



“ಮುಂಜಾನೆಯ ಮೆರಗು”

ಜಗಳೂರು ಅ, 07– ಪಟ್ಟಣದ ಹೊಚಿ. ಬೊರಯ್ಯ ಎಸ್ಸಿ, ಎಸ್ಟಿ ಪ್ರಥಮ ದರ್ಜೆ ಕಾಲೇಜಿನ ಕಚೇರಿ ಅಧೀಕ್ಷಕರಾಗಿ ಸೇವೆ ಸಲ್ಲಿಸಿ ನಿವೃತ್ತರಾಗಿದ್ದ ಬಿ.ಎಸ್. ಹನುಮಂತಪ್ಪ (68) ಅವರು ಅನಾರೋಗ್ಯದಿಂದ ಸೋಮವಾರ ಮುಂಜಾನೆ ದಾವಣಗೆರೆಯ ಎಸ್.ಎಸ್. ಐಚಿಕ್ ಆಸ್ಪತ್ರೆಯಲ್ಲಿ ನಿಧನರಾದರು.

ಮೃತರು ಪತ್ನಿ, ಮೂವರು ಹೆಣ್ಣು ಮಕ್ಕಳು ಹಾಗೂ ಮೂವರು ಗಂಡು ಮಕ್ಕಳು ಸೇರಿದಂತೆ ಆರು ಮಕ್ಕಳನ್ನು ಹಾಗೂ ಅಪಾರ ಬಂಧು–ಮಿತ್ರರನ್ನು ಅಗಲಿದ್ದಾರೆ.

ಮೃತರ ಅಂತ್ಯಕ್ರಿಯೆಯನ್ನು ಅವರ ಸ್ವಗ್ರಾಮವಾದ ಕೂಡ್ಲಿಗಿ ತಾಲೂಕಿನ ಪೂಜಾರಹಳ್ಳಿ ಗ್ರಾಮದಲ್ಲಿ ಸೋಮವಾರ ಸಂಜೆ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಶುದ್ಧ ಕುಡಿಯುವ ನೀರಿನ ಘಟಕಗಳು ನಿರುಪಯುಕ್ತ

ಜಾನುವಾರು ಕಟ್ಟುವ ತಾಣವಾದ ಕುಡಿಯುವ ನೀರಿನ ಘಟಕಗಳು

“ಮುಂಜಾನೆಯ ಮೆರಗು”

ಜಗಳೂರು, ಅ, 07– ಗ್ರಾಮಸ್ಥರಿಗೆ ಶುದ್ಧ ಕುಡಿಯುವ ನೀರು ಒದಗಿಸುವ ಉದ್ದೇಶದಿಂದ ಲಕ್ಷಾಂತರ ರೂಪಾಯಿ ವೆಚ್ಚದಲ್ಲಿ ನಿರ್ಮಿಸಿರುವ ಶುದ್ಧ ಕುಡಿಯುವ ನೀರಿನ ಘಟಕಗಳು ನಿರ್ವಹಣೆಯ ಕೊರತೆಯಿಂದಾಗಿ ಕೆಟ್ಟು ನಿಂತಿದ್ದು, ಇದೀಗ ಕುರಿ, ಮೇಕೆ ಹಾಗೂ ಜಾನುವಾರುಗಳನ್ನು ಕಟ್ಟುವ ತಾಣಗಳಾಗಿ ಮಾರ್ಪಟ್ಟಿವೆ ಎಂದು ಹನುಮಂತಪುರ ಗ್ರಾಮದ ನಿವಾಸಿಗಳಾದ ಹನುಮಂತಪ್ಪ, ಬಸವರಾಜ್, ಕಲ್ಲಪ್ಪ ಸೇರಿದಂತೆ ಗ್ರಾಮಸ್ಥರು ದೂರಿದ್ದಾರೆ.

ತಾಲೂಕಿನ ಹನುಮಂತಪುರ ಗ್ರಾಮ ಪಂಚಾಯಿತಿ ಕೇಂದ್ರ ಸ್ಥಾನವಾಗಿದ್ದು, ಗ್ರಾಮದಲ್ಲಿ ಎರಡು ಸಾವಿರಕ್ಕೂ ಅಧಿಕ ಜನಸಂಖ್ಯೆ ಇದೆ. ತಾಲೂಕಿನ ಪ್ರಮುಖ ಹಾಗೂ ದೊಡ್ಡ ಗ್ರಾಮ ಪಂಚಾಯಿತಿಗಳಲ್ಲಿ ಒಂದಾಗಿರುವ ಹನುಮಂತಪುರದಲ್ಲೇ ಗ್ರಾಮಸ್ಥರಿಗೆ ಸಮರ್ಪಕ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಇಲ್ಲದಿರುವುದು ದುರಂತದ ಸಂಗತಿಯಾಗಿದೆ ಎಂದು ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಗ್ರಾಮದಲ್ಲಿ ಕೆಲವು ವರ್ಷಗಳ ಹಿಂದೆ ಗ್ರಾಮಸ್ಥರ ಅನುಕೂಲಕ್ಕಾಗಿ ಎರಡು ಶುದ್ಧ ಕುಡಿಯುವ ನೀರಿನ ಘಟಕಗಳನ್ನು ನಿರ್ಮಿಸಲಾಗಿತ್ತು. ಆರಂಭದಲ್ಲಿ ಕೆಲವು ತಿಂಗಳುಗಳ ಕಾಲ ಘಟಕಗಳು ಉತ್ತಮವಾಗಿ ಕಾರ್ಯನಿರ್ವಹಿಸಿ ಗ್ರಾಮಸ್ಥರಿಗೆ ಶುದ್ಧ ನೀರು ಲಭ್ಯವಾಗುತ್ತಿತ್ತು. ಆದರೆ ನಂತರ ಸೂಕ್ತ ನಿರ್ವಹಣೆ ಹಾಗೂ ನಿರಂತರ ಮೇಲ್ವಿಚಾರಣೆಯ ಕೊರತೆಯಿಂದ ಎರಡೂ ಘಟಕಗಳು ಹಂತಹಂತವಾಗಿ ದುರಸ್ತಿಗೊಳಗಾಗದೆ ಕೆಟ್ಟು ನಿಂತಿವೆ.

ಘಟಕಗಳು ಸ್ಥಗಿತಗೊಂಡು ಹಲವು ದಿನಗಳು ಕಳೆದರೂ ಸಂಬಂಧಪಟ್ಟ ಇಲಾಖೆಯವರು ಸಮರ್ಪಕವಾಗಿ ದುರಸ್ತಿ ಮಾಡಿಸಿಲ್ಲ. ಇದರಿಂದ ಘಟಕಗಳ ಕಟ್ಟಡಗಳು ನಿರುಪಯುಕ್ತವಾಗಿದ್ದು, ಗ್ರಾಮಸ್ಥರು ಅವುಗಳ ಸುತ್ತಮುತ್ತ ಕುರಿ, ಮೇಕೆ ಹಾಗೂ ಜಾನುವಾರುಗಳನ್ನು ಕಟ್ಟುವಂತಾಗಿದೆ. ಜನರ ಆರೋಗ್ಯ ಕಾಪಾಡಬೇಕಿದ್ದ ಶುದ್ಧ ನೀರಿನ ಘಟಕಗಳು ಜಾನುವಾರುಗಳ ಆಶ್ರಯ ತಾಣವಾಗಿರುವುದು ಆಡಳಿತದ ನಿರ್ಲಕ್ಷ್ಯಕ್ಕೆ ಸಾಕ್ಷಿಯಾಗಿದೆ ಎಂದು ಗ್ರಾಮಸ್ಥರು ಬೇಸರ ವ್ಯಕ್ತಪಡಿಸಿದ್ದಾರೆ.

ಲಕ್ಷಾಂತರ ವೆಚ್ಚ ನೀರಿಗೇ?

ಸಾರ್ವಜನಿಕರ ತೆರಿಗೆ ಹಣದಿಂದ ಲಕ್ಷಾಂತರ ರೂಪಾಯಿ ವೆಚ್ಚ ಮಾಡಿ ನಿರ್ಮಿಸಿರುವ ಶುದ್ಧ ಕುಡಿಯುವ ನೀರಿನ ಘಟಕಗಳು ಕೆಲವೇ ವರ್ಷಗಳಲ್ಲಿ ನಿರುಪಯುಕ್ತವಾಗಿರುವುದು ಹಲವು ಪ್ರಶ್ನೆಗಳನ್ನು ಹುಟ್ಟುಹಾಕಿದೆ. ಘಟಕಗಳ ನಿರ್ಮಾಣಕ್ಕೆ ಮಾತ್ರ ಒತ್ತು ನೀಡುವ ಬದಲು, ಅವುಗಳ ನಿರಂತರ ನಿರ್ವಹಣೆ, ದುರಸ್ತಿ ಹಾಗೂ ಕಾರ್ಯನಿರ್ವಹಣೆಗೆ ಅಗತ್ಯವಿರುವ ವ್ಯವಸ್ಥೆ ಕಲ್ಪಿಸಬೇಕಾಗಿದೆ ಎಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.



ಪ್ರಸ್ತುತ ಗ್ರಾಮದಲ್ಲಿ ಶುದ್ಧ ಕುಡಿಯುವ ನೀರಿನ ಕೊರತೆ ಎದುರಾಗಿರುವ ಹಿನ್ನೆಲೆಯಲ್ಲಿ ಗ್ರಾಮಸ್ಥರು ಜಗಳೂರು ಪಟ್ಟಣದಿಂದ ಬರುವ ಕುಡಿಯುವ ನೀರಿನ ಟ್ಯಾಂಕರ್‌ಗಳನ್ನೇ ಅವಲಂಬಿಸುವ ಪರಿಸ್ಥಿತಿ ನಿರ್ಮಾಣವಾಗಿದೆ. ಬೇಸಿಗೆ ಹಾಗೂ ಬರದ ಸಂದರ್ಭದಲ್ಲಿ ನೀರಿನ ಸಮಸ್ಯೆ ಮತ್ತಷ್ಟು ತೀವ್ರಗೊಳ್ಳುವ ಸಾಧ್ಯತೆಯಿದ್ದು, ಕೂಡಲೇ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಎರಡು ಘಟಕಗಳ ಸ್ಥಿತಿಗತಿ ಪರಿಶೀಲಿಸಿ ಅಗತ್ಯ ದುರಸ್ತಿ ಕಾಮಗಾರಿ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಆಕ್ರೋಶ

ಗ್ರಾಮ ಪಂಚಾಯಿತಿ ಕೇಂದ್ರ ಸ್ಥಾನದಲ್ಲಿಯೇ ಶುದ್ಧ ಕುಡಿಯುವ ನೀರಿನ ಘಟಕಗಳು ಕೆಟ್ಟು ನಿಂತಿದ್ದರೂ ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಗಮನ ಹರಿಸದಿರುವುದು ಗ್ರಾಮಸ್ಥರಲ್ಲಿ ಅಸಮಾಧಾನ ಮೂಡಿಸಿದೆ. ತಕ್ಷಣ ಘಟಕಗಳನ್ನು ದುರಸ್ತಿಗೊಳಿಸಿ, ಶುದ್ಧ ನೀರು ಪೂರೈಕೆ ಪುನರಾರಂಭಿಸಬೇಕು. ಇಲ್ಲವಾದಲ್ಲಿ ಸಾರ್ವಜನಿಕರ ಹಣದಲ್ಲಿ ನಿರ್ಮಿಸಿದ ಯೋಜನೆಗಳು ಕೇವಲ ಕಟ್ಟಡಗಳಾಗಿ ಉಳಿಯುವಂತಾಗುತ್ತದೆ ಎಂದು ಗ್ರಾಮಸ್ಥರು ಎಚ್ಚರಿಸಿದ್ದಾರೆ.

ಅತಿವೇಗದ ವಾಹನಗಳಿಗೆ ಕಡಿವಾಣ ಹಾಕಿ; ಅಪಘಾತ ತಪ್ಪಿಸಿ



“ಮುಂಜಾನೆಯ ಮೆರಗು”

ಜಗಳೂರು ಅ, 07– ಪಟ್ಟಣದ ಹಳೆ ಗಾಂಧಿ ವೃತ್ತದಿಂದ ಚಳ್ಳಕೆರೆ ವೃತ್ತದವರೆಗೆ ನಿರ್ಮಿಸಿರುವ ಸಿಸಿ ರಸ್ತೆಯಲ್ಲಿ ವಾಹನಗಳ ಅತಿವೇಗದ ಸಂಚಾರ ಹೆಚ್ಚಾಗಿದ್ದು, ಅಪಘಾತ ಸಂಭವಿಸುವ ಆತಂಕ ಎದುರಾಗಿದೆ. ವಾಹನಗಳ ವೇಗಕ್ಕೆ ನಿಯಂತ್ರಣ ಹಾಕಿ, ಸಾರ್ವಜನಿಕರ ಸುರಕ್ಷತೆಗೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

ಕೊಟ್ಟೂರು, ಚಿತ್ರದುರ್ಗ ಹಾಗೂ ಚಳ್ಳಕೆರೆ ಸೇರಿದಂತೆ ವಿವಿಧ ಭಾಗಗಳಿಂದ ಜಗಳೂರು ಪಟ್ಟಣಕ್ಕೆ ಪ್ರತಿದಿನ ನೂರಾರು ಬಸ್, ಲಾರಿ, ಕಾರು, ಆಟೊ, ದ್ವಿಚಕ್ರ ವಾಹನ ಸೇರಿದಂತೆ ವಿವಿಧ ವಾಹನಗಳು ಇದೇ ರಸ್ತೆಯ ಮೂಲಕ ಸಂಚರಿಸುತ್ತಿವೆ. ಪ್ರಮುಖ ಸಂಪರ್ಕ ರಸ್ತೆಯಾಗಿರುವುದರಿಂದ ದಿನವಿಡೀ ವಾಹನ ದಟ್ಟಣೆ ಕಂಡುಬರುತ್ತಿದೆ.

ರಸ್ತೆಯಲ್ಲಿ ಕೆಲ ವಾಹನಗಳು ಅತಿವೇಗವಾಗಿ ಸಂಚರಿಸುತ್ತಿರುವುದರಿಂದ ಪಾದಚಾರಿಗಳು, ವೃದ್ಧರು, ಮಹಿಳೆಯರು ಹಾಗೂ ಶಾಲಾ–ಕಾಲೇಜು ವಿದ್ಯಾರ್ಥಿಗಳು ರಸ್ತೆ ದಾಟಲು ಪರದಾಡುವಂತಾಗಿದೆ. ವಿಶೇಷವಾಗಿ ಆಸ್ಪತ್ರೆಯಿಂದ ಚಿಕಿತ್ಸೆ ಪಡೆದು ಮರಳುವ ವೃದ್ಧರು ಹಾಗೂ ರೋಗಿಗಳು ರಸ್ತೆ ದಾಟುವ ಸಂದರ್ಭದಲ್ಲಿ ವಾಹನಗಳ ವೇಗದಿಂದ ಆತಂಕಕ್ಕೆ ಒಳಗಾಗುತ್ತಿದ್ದಾರೆ ಎಂದು ಸ್ಥಳೀಯರು ತಿಳಿಸಿದ್ದಾರೆ.

ಪಟ್ಟಣದ ಪ್ರಮುಖ ವಾಣಿಜ್ಯ ಹಾಗೂ ಜನನಿಬಿಡ ಪ್ರದೇಶವಾಗಿರುವ ಈ ರಸ್ತೆಯಲ್ಲಿ ಪಾದಚಾರಿಗಳ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಬೇಕಿದೆ. ವಾಹನಗಳ ವೇಗ ನಿಯಂತ್ರಣಕ್ಕೆ ಸೂಕ್ತ ಸೂಚನಾ ಫಲಕ, ವೇಗ ನಿಯಂತ್ರಕ (ಸ್ಪೀಡ್ ಬ್ರೇಕರ್), ರಸ್ತೆ ಗುರುತುಗಳು ಹಾಗೂ ಅಗತ್ಯವಿರುವ ಕಡೆ ಪಾದಚಾರಿ ದಾಟುವ ವ್ಯವಸ್ಥೆ ಕಲ್ಪಿಸಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

ಅಪಘಾತ ಸಂಭವಿಸಿದ ಬಳಿಕ ಕ್ರಮ ಕೈಗೊಳ್ಳುವುದಕ್ಕಿಂತ ಮುನ್ನೆಚ್ಚರಿಕೆ ಕ್ರಮಗಳಿಗೆ ಆದ್ಯತೆ ನೀಡಬೇಕು. ಈ ಕುರಿತು ಪೊಲೀಸ್ ಇಲಾಖೆ, ಲೋಕೋಪಯೋಗಿ ಇಲಾಖೆ ಹಾಗೂ ಪಟ್ಟಣ ಪಂಚಾಯಿತಿ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ, ರಸ್ತೆ ಸುರಕ್ಷತೆಗೆ ಅಗತ್ಯ ಕ್ರಮಗಳನ್ನು ತ್ವರಿತವಾಗಿ ಕೈಗೊಳ್ಳಬೇಕು ಎಂದು ಸಾಮಾಜಿಕ ಹೋರಾಟಗಾರ ಚಾಂಪಿಯರ್ ಒತ್ತಾಯಿಸಿದರು.

ಅಪೌಷ್ಟಿಕತೆ ನಿವಾರಣೆಗೆ ಕುಟುಂಬದ ಸಹಕಾರ ಅತ್ಯಗತ್ಯ: ಶಿವಕುಮಾರ್

“ಮುಂಜಾನೆಯ ಮೆರಗು”

ಜಗಳೂರು ಅ, 07– ಮಕ್ಕಳಲ್ಲಿ ಹಾಗೂ ಗರ್ಭಿಣಿ ಮತ್ತು ಬಾಣಂತಿಯರಲ್ಲಿ ಅಪೌಷ್ಟಿಕತೆ ನಿವಾರಿಸಿ, ಆರೋಗ್ಯಕರ ಹಾಗೂ ಪೌಷ್ಟಿಕ ಜೀವನಶೈಲಿಯನ್ನು ಬೆಳೆಸುವಲ್ಲಿ ಪ್ರತಿಯೊಬ್ಬರ ಸಹಕಾರ ಅತ್ಯಂತ ಅಗತ್ಯವಾಗಿದೆ ಎಂದು ಶಿಶು ಅಭಿವೃದ್ಧಿ ಯೋಜನಾಧಿಕಾರಿ ಶಿವಕುಮಾರ್ ಹೇಳಿದರು.

ತಾಲೂಕಿನ ಬಿದರಕೆರೆ ಗ್ರಾಮದ ಎರಡನೇ ಅಂಗನವಾಡಿ ಕೇಂದ್ರದಲ್ಲಿ ಬುಧವಾರ ಆಯೋಜಿಸಿದ್ದ ಪೋಷಣ್ ಮಾಸಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳ ದೈಹಿಕ ಹಾಗೂ ಮಾನಸಿಕ ಬೆಳವಣಿಗೆಗೆ ಪೌಷ್ಟಿಕ ಆಹಾರ ಪ್ರಮುಖ ಪಾತ್ರ ವಹಿಸುತ್ತದೆ. ಬಾಲ್ಯದಲ್ಲಿಯೇ ಮಕ್ಕಳಿಗೆ ಸಮತೋಲಿತ ಆಹಾರ ನೀಡುವುದರಿಂದ ಅವರ ರೋಗನಿರೋಧಕ ಶಕ್ತಿ ಹೆಚ್ಚುವುದರ ಜೊತೆಗೆ ಉತ್ತಮ ಬೆಳವಣಿಗೆ ಸಾಧ್ಯವಾಗುತ್ತದೆ. ಈ ಹಿನ್ನೆಲೆಯಲ್ಲಿ ಗರ್ಭಿಣಿಯರು, ಬಾಣಂತಿಯರು ಹಾಗೂ ಚಿಕ್ಕ ಮಕ್ಕಳಿಗೆ ಅಗತ್ಯವಾದ ಪೌಷ್ಟಿಕಾಂಶ ದೊರೆಯುವಂತೆ ಕುಟುಂಬದ ಸದಸ್ಯರು ವಿಶೇಷ ಕಾಳಜಿ ವಹಿಸಬೇಕು ಎಂದರು.

ಅಂಗನವಾಡಿ ಕೇಂದ್ರಗಳ ಮೂಲಕ ಸರ್ಕಾರ ಒದಗಿಸುತ್ತಿರುವ ಪೌಷ್ಟಿಕ ಆಹಾರ, ಆರೋಗ್ಯ ತಪಾಸಣೆ, ಲಸಿಕೆ ಸೇರಿದಂತೆ ವಿವಿಧ ಆರೋಗ್ಯ ಸೇವೆಗಳನ್ನು ಅರ್ಹ ಫಲಾನುಭವಿಗಳು ಸಮರ್ಪಕವಾಗಿ ಬಳಸಿಕೊಳ್ಳಬೇಕು. ಮಕ್ಕಳ ತೂಕ, ಎತ್ತರ ಹಾಗೂ ಬೆಳವಣಿಗೆಯನ್ನು ನಿಯಮಿತವಾಗಿ ಪರಿಶೀಲಿಸುವ ಮೂಲಕ ಅಪೌಷ್ಟಿಕತೆಯ ಸಮಸ್ಯೆಯನ್ನು ಆರಂಭದಲ್ಲಿಯೇ ಗುರುತಿಸಿ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಸಲಹೆ ನೀಡಿದರು.



ಪೋಷಕರಲ್ಲಿ ನಿರಂತರ ಜಾಗೃತಿ ಅಗತ್ಯ

ಪಿಡಿಒ ಅನಿಲ್ ಕುಮಾರ್ ಮಾತನಾಡಿ, ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಪೌಷ್ಟಿಕತೆ ಅತ್ಯಗತ್ಯ. ಮಕ್ಕಳ ಆರೋಗ್ಯ ಮತ್ತು ಪೌಷ್ಟಿಕತೆಯ ಕುರಿತು ಪೋಷಕರಲ್ಲಿ ನಿರಂತರವಾಗಿ ಜಾಗೃತಿ ಮೂಡಿಸುವ ಅಗತ್ಯವಿದೆ. ಗ್ರಾಮೀಣ ಪ್ರದೇಶಗಳಲ್ಲಿ ಲಭ್ಯವಿರುವ ಸ್ಥಳೀಯ ಆಹಾರ ಪದಾರ್ಥಗಳನ್ನೇ ಸಮರ್ಪಕವಾಗಿ ಬಳಸಿಕೊಂಡು ಮಕ್ಕಳಿಗೆ ಪೌಷ್ಟಿಕ ಆಹಾರ ನೀಡಬಹುದು. ಈ ನಿಟ್ಟಿನಲ್ಲಿ ಗ್ರಾಮ ಪಂಚಾಯಿತಿ ವತಿಯಿಂದ ಅಗತ್ಯ ಸಹಕಾರ ನೀಡಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ಮಕ್ಕಳಿಗೆ ಹಾಗೂ ಪೋಷಕರಿಗೆ ಪೌಷ್ಟಿಕ ಆಹಾರದ ಮಹತ್ವದ ಕುರಿತು ಮಾಹಿತಿ ನೀಡಲಾಯಿತು. ಸಿರಿಧಾನ್ಯಗಳು, ಬೇಳೆಕಾಳುಗಳು, ಹಸಿರು ಸೊಪ್ಪು, ತರಕಾರಿ, ಹಣ್ಣುಗಳು ಸೇರಿದಂತೆ ವಿವಿಧ ಬಗೆಯ ಪೌಷ್ಟಿಕ ಆಹಾರ ಪದಾರ್ಥಗಳನ್ನು ಪ್ರದರ್ಶಿಸಿ, ಅವುಗಳಲ್ಲಿರುವ ಪೌಷ್ಟಿಕಾಂಶಗಳ ಕುರಿತು ಅಂಗನವಾಡಿ ಕಾರ್ಯಕರ್ತರು ವಿವರಿಸಿದರು.

ಈ ಸಂದರ್ಭದಲ್ಲಿ ಹಿರಿಯ ಮೇಲ್ವಿಚಾರಕಿ ಸುವರ್ಣ ಪಟೇಲ್, ಮೇಲ್ವಿಚಾರಕಿ ಅನುರಾಧ, ಪಂಚಾಯಿತಿ ಕಾರ್ಯದರ್ಶಿ ಮಹಾಂತೇಶ್ ಸೇರಿದಂತೆ ವಲಯದ ಎಲ್ಲಾ ಅಂಗನವಾಡಿ ಕಾರ್ಯಕರ್ತರು, ಸಹಾಯಕಿಯರು, ಪೋಷಕರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

ಹೊನ್ನಮರಡಿಯಲ್ಲಿ ಚರಂಡಿ ಸ್ವಚ್ಛತೆ ಕೊರತೆ

ಕುಡಿಯುವ ನೀರು ವ್ಯರ್ಥ; ಮೂಲಸೌಕರ್ಯ ಕಲ್ಪಿಸಲು ಗ್ರಾಮಸ್ಥರ ಆಗ್ರಹ

“ಮುಂಜಾನೆಯ ಮೆರಗು”

ಜಗಳೂರು ಅ, 07– ತಾಲೂಕಿನ ದೋಣಿಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಹೊನ್ನಮರಡಿ ಗ್ರಾಮದಲ್ಲಿ ಮೂಲಭೂತ ಸೌಲಭ್ಯಗಳ ಕೊರತೆಯಿಂದ ಗ್ರಾಮಸ್ಥರು ಹಲವು ಸಮಸ್ಯೆಗಳನ್ನು ಎದುರಿಸುತ್ತಿದ್ದು, ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಗ್ರಾಮಕ್ಕೆ ಭೇಟಿ ನೀಡಿ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ.

ಗ್ರಾಮದಲ್ಲಿರುವ ಚರಂಡಿಗಳನ್ನು ಸಮರ್ಪಕವಾಗಿ ಸ್ವಚ್ಛಗೊಳಿಸದೆ ಇರುವುದರಿಂದ ಹೂಳು, ಕಸ ಹಾಗೂ ತ್ಯಾಜ್ಯ ತುಂಬಿಕೊಂಡಿದ್ದು, ಕೊಳಚೆ ನೀರು ಸರಾಗವಾಗಿ ಹರಿಯದೆ ಅಲ್ಲಲ್ಲಿ ನಿಂತು–ಕೊಂಡಿದೆ. ಇದರಿಂದ ಚರಂಡಿಗಳಿಂದ ದುರ್ವಾಸನೆ ಬೀರುತ್ತಿದ್ದು, ಸೊಳ್ಳೆಗಳ ಉತ್ಪತ್ತಿಗೆ ಕಾರಣವಾಗುತ್ತಿದೆ. ಮಳೆಗಾಲದಲ್ಲಿ ಕೊಳಚೆ ನೀರು ರಸ್ತೆಗೆ ಹರಿದು ಸಾರ್ವಜನಿಕರಿಗೆ ತೊಂದರೆಯಾಗುವ ಸಾಧ್ಯತೆ ಇದ್ದು, ಸಾಂಕ್ರಾಮಿಕ ರೋಗಗಳ ಭೀತಿಯಲ್ಲಿಯೇ ಗ್ರಾಮಸ್ಥರು ಜೀವನ ನಡೆಸುವಂತಾಗಿದೆ ಎಂದು ದೂರಿದ್ದಾರೆ.

ಮಿನಿ ಟ್ಯಾಂಕ್‌ಗಳಿಂದ ನೀರು ಪೋಲು

ಗ್ರಾಮದಲ್ಲಿರುವ ಕುಡಿಯುವ ನೀರಿನ ಮಿನಿ ಟ್ಯಾಂಕ್‌ಗಳ ನಿರ್ವಹಣೆಯೂ ಸಮರ್ಪಕವಾಗಿಲ್ಲ ಎಂಬ ಆರೋಪ ಕೇಳಿಬಂದಿದೆ. ಗ್ರಾಮದಲ್ಲಿ ಒಟ್ಟು ಮೂರು ಮಿನ